ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ   NIMMURU SUDDI

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

ಸಂಪಾದಕರು: ಸುಂದರ್   Editor : Sundar

Volume: 01, Issue: 205 RNI Number : KNKAN/25/A2770 05-08-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :205 ರಾಯಚೂರು 05-08-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ದಾಖಲೆ ಕೊಡದ ಮನೆಗಳಿಗೆ ಗೃಹಜ್ಯೋತಿ ಯೋಜನೆಯ ಉಚಿತ ವಿದ್ಯುತ್ ಇಲ್ಲ



ಬೆಂಗಳೂರು,ಆ.4-

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಪಡೆಯುತ್ತಿರುವ ಗ್ರಾಹಕರಿಗೆ ಇಂಧನ ಇಲಾಖೆ ಶಾಕಿಂಗ್ ಸುದ್ದಿ ನೀಡಿದೆ.ರಾಜ್ಯಾದ್ಯಂತ ನಡೆಯುತ್ತಿರುವ ಮನೆ-ಮನೆ ಸಮೀಕ್ಷೆಯಲ್ಲಿ ಅಗತ್ಯ ದಾಖಲೆಗಳು ಮತ್ತು ಮಾಹಿತಿಯನ್ನು ನೀಡದಿದ್ದರೆ ಫಲಾನುಭವಿಗಳು ಯೋಜನೆಯ ವ್ಯಾಪ್ತಿಯಿಂದ ಹೊರಗುಳಿಯುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಯಾವುದೇ ಅರ್ಹ ಗ್ರಾಹಕರು ಯೋಜನೆಯ ಸೌಲಭ್ಯದಿಂದ ವಂಚಿತರಾಗದಂತೆ ವಿಶೇಷ ಶಿಬಿರಗಳನ್ನು ಆಯೋಜಿಸುವ ಪ್ರಸ್ತಾವನೆಯನ್ನೂ ಸರ್ಕಾರದ ಮುಂದಿಡಲಾಗಿದೆ.ಇಂಧನ ಇಲಾಖೆಯ ಅಂಕಿ-ಅಂಶಗಳ ಪ್ರಕಾರ ರಾಜ್ಯದಲ್ಲಿ ಗೃಹಜ್ಯೋತಿ ಯೋಜನೆಯಡಿ 1,65,32,652 ಗೃಹ ವಿದ್ಯುತ್ ಗ್ರಾಹಕರು ನೋಂದಾಯಿಸಿಕೊಂಡಿದ್ದಾರೆ. ಇವರಲ್ಲಿ ಆಗಸ್ಟ್ 2, 2026ರವರೆಗೆ 91,50,081 ಫಲಾನುಭವಿಗಳ ಮನೆಗಳಿಗೆ ಮೀಟರ್ ರೀಡರ್‌ಗಳು ಭೇಟಿ ನೀಡಿ ಸಮೀಕ್ಷೆ ಪೂರ್ಣಗೊಳಿಸಿದ್ದು, ಇನ್ನೂ 73,82,571 ಫಲಾನುಭವಿಗಳ ಮಾಹಿತಿ ಸಂಗ್ರಹವಾಗಿಲ್ಲ.

ಮನೆ-ಮನೆ ಸಮೀಕ್ಷೆಯ ಉದ್ದೇಶ ಯೋಜನೆಯ ಫಲಾನುಭವಿ ಗಳ ವಿವರಗಳನ್ನು ನವೀಕರಿಸುವುದು ಮತ್ತು ಯೋಜನೆಯ ಲಾಭ ಸರಿಯಾದ ಫಲಾನುಭವಿಗಳಿಗೆ ತಲುಪುತ್ತಿರುವುದನ್ನು ಖಚಿತಪಡಿಸಿಕೊಳ್ಳುವುದಾಗಿದೆ. ಸಮೀಕ್ಷೆ ವೇಳೆ ಗ್ರಾಹಕರು ಮನೆಯಲ್ಲಿ ಇಲ್ಲದಿದ್ದರೆ ಅಥವಾ ಮಾಹಿತಿ ನೀಡಲು ನಿರಾಕರಿಸಿದರೆ ಅವರು ಯೋಜನೆಯ ಪಟ್ಟಿಯಿಂದ ಹೊರಗುಳಿಯುವ ಸಾಧ್ಯತೆ ಇದೆ ಎಂಬ ಎಚ್ಚರಿಕೆಯನ್ನು ಇಲಾಖೆ ನೀಡಿದೆ.

ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ರಾಜ್ಯದ ಎಲ್ಲಾ ಎಸ್ಕಾಂ ಕಚೇರಿಗಳಲ್ಲಿ ವಿಶೇಷ ಸಮೀಕ್ಷಾ ಶಿಬಿರಗಳನ್ನು ನಡೆಸಲು ಸರ್ಕಾರದ ಅನುಮತಿ ಕೋರಲಾಗಿದೆ. ಈ ಶಿಬಿರಗಳಲ್ಲಿ ಫಲಾನುಭವಿಗಳು ಸ್ವತಃ ಹಾಜರಾಗಿ ತಮ ದಾಖಲೆಗಳು ಮತ್ತು ಮಾಹಿತಿಯನ್ನು ಸಲ್ಲಿಸ

3 ನೇ ಪುಟಕ್ಕೆ

ಎಸ್‌ಐಆರ್ : ರಾಜ್ಯದಲ್ಲಿ ಸುಮಾರು 1 ಕೋಟಿಗೂ ಅಧಿಕ ಮಂದಿ ಡಿಲೀಟ್

ಬೆಂಗಳೂರು, ಆ.4-

ರಾಜ್ಯದಲ್ಲಿ ಸುಮಾರು ಒಂದು ಕೋಟಿಗೂ ಅಧಿಕ ಮಂದಿಯನ್ನು ಎಎಸ್‌ಡಿಡಿಒ ವಿಭಾಗದಲ್ಲಿರಿಸುವ ಮೂಲಕ ಚುನಾವಣಾ ಆಯೋಗ ಕಾಂಗ್ರೆಸ್ ಹಾಗೂ ಅದರ ಮಿತ್ರ ಪಕ್ಷಗಳ ಆರೋಪವನ್ನು ಸಾಬೀತು ಪಡಿಸಿದೆ.

ಈ ಹಿಂದೆ ಎಸ್‌ಐಆರ್ ನಡೆದಿದ್ದ ರಾಜ್ಯಗಳಲ್ಲಿ 70 ರಿಂದ 80 ಲಕ್ಷ ಮಂದಿಯನ್ನು ಕೈಬಿಟ್ಟಿರುವ ಆರೋಪಗಳು ಕೇಳಿ ಬಂದಿದ್ದವು. ಈಗ ರಾಜ್ಯದಲ್ಲಿ ಶೇ.19.95ರಷ್ಟು ಜನರನ್ನು ಗೈರುಹಾಜರಿ, ಸ್ಥಳಾಂತರ, ಸಾವು, ತೆಗೆದು ಹಾಕುವಿಕೆ ಮತ್ತು ನಕಲಿ ವಿಭಾಗದಲ್ಲಿ ಗುರುತಿಸುವ ಮೂಲಕ ಆತಂಕ ಸೃಷ್ಟಿಸಿದೆ.

ಅದರಲ್ಲೂ ಬೆಂಗಳೂರು ಮತ್ತು ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಶೇ. 50ಕ್ಕಿಂತಲೂ ಹೆಚ್ಚಿನ ಜನ ಎಎಸ್‌ಡಿಡಿಒ ವಿಭಾಗದಲ್ಲಿ ಗುರುತಿಸಿಕೊಂಡಿದ್ದಾರೆ. ಇದರಿಂದ ಆತಂಕಕ್ಕೊಳಗಾಗಿರುವ ಕಾಂಗ್ರೆಸ್ ಬಾಕಿಯಿರುವ ನಾಲ್ಕು ದಿನಗಳಲ್ಲಿ ಜಾಗ್ರತೆವಹಿಸುವಂತೆ ತಮ ಪಕ್ಷದ ಬಿಎಲ್‌ಎ-2ಗಳಿಗೆ ಎಚ್ಚರಿಕೆ ಸಂದೇಶ ರವಾನಿಸಿದೆ. ಎಎಸ್‌ಎಸ್‌ಬಿಒ ಪಟ್ಟಿಯನ್ನು ಆಧರಿಸಿ ಪರಿಶೀಲನೆ ಗೊಳಪಡಿಸಬೇಕಾದ ಮತದಾರರ ಪಟ್ಟಿಯನ್ನು ಗಮನಿಸುವಂತೆ ಮನವಿ ಮಾಡಿದ್ದಾರೆ.

ಕರ್ನಾಟಕದ ಮುಖ್ಯ ಚುನಾವಣಾಧಿ ಕಾರಿಗಳ ಕಚೇರಿ ನಿನ್ನೆ ಬಿಡುಗಡೆ ಮಾಡಿದ ದೈನಂದಿನ ಪತ್ರಿಕಾ ಪ್ರಕಟಣೆಯ ಪ್ರಕಾರ, ರಾಜ್ಯದಲ್ಲಿ ಮತದಾರರ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಡಿ ಮನೆ ಮನೆ ಸಮೀಕ್ಷೆ ಹಾಗೂ ಎಣಿಕೆ ನಮೂನೆಗಳ (ಎನ್ಯೂಮರೇಷನ್ ಫಾರಂ-ಇಎಫ್) ಡಿಜಿಟಲೀಕರಣ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ.

2026ರ ಜೂನ್ 16ರ ಮತದಾರರ ಪಟ್ಟಿಯ ಪ್ರಕಾರ ರಾಜ್ಯದಲ್ಲಿ ಒಟ್ಟು 5,54,32,314 ಮತದಾರರಿದ್ದು, ಎಲ್ಲ ಮತದಾರರಿಗೂ ಎಣಿಕೆ ನಮೂನೆಗಳನ್ನು ಮುದ್ರಿಸಿ ಬಿಎಲ್‌ಒಗಳ ಮೂಲಕ ವಿತರಿಸಲಾಗಿದೆ.

ಜೂನ್ 30ರಿಂದ ಆಗಸ್ಟ್ 8ರವರೆಗೆ ಮನೆ ಮನೆ

3 ನೇ ಪುಟಕ್ಕೆ

ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಇಂದಿನ ಪೀಳಿಗೆಗೆ ಆದರ್ಶವಾಗಲಿ: ಕೃಷ್ಣ ಶಿವವಂತಗೇರಿ

'ನಮ್ಮ ಭಾರತದ ಸ್ವಾತಂತ್ರ್ಯ ಹೋರಾಟಗಾರರು' ಕೃತಿ ಬಿಡುಗಡೆ - ಶಾಲಾ ಗ್ರಂಥಾಲಯಗಳಿಗೆ ಪುಸ್ತಕ ಖರೀದಿಸುವ ಭರವಸೆ



ರಾಯಚೂರು,ಆ.4-

ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಬದುಕನ್ನೇ ರಾಷ್ಟ್ರಕ್ಕೆ ಅರ್ಪಿಸಿದ ಮಹಾನ್ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನ ಮತ್ತು ದೇಶಭಕ್ತಿಯನ್ನು ಪ್ರತಿಯೊಬ್ಬ ಭಾರತೀಯನು ಸದಾ ಸ್ಮರಿಸಬೇಕು. ಅವರ ಹೋರಾಟದ ಇತಿಹಾಸ ಮತ್ತು ಆದರ್ಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಮೂಲಕ ರಾಷ್ಟ್ರಪ್ರೇಮದ ಮೌಲ್ಯಗಳನ್ನು ಬೆಳೆಸಬೇಕಾಗಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಯಚೂರು ಜಿಲ್ಲಾ ಘಟಕದ ಅಧ್ಯಕ್ಷ ಕೃಷ್ಣ ಶಿವವಂತಗೇರಿ ಹೇಳಿದರು.

ನಗರದ ಎನ್‌ಜಿಒ ಭವನದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ರಾಯಚೂರು ಜಿಲ್ಲಾ ಘಟಕ ಹಾಗೂ ವೈಭವಿ ಪ್ರಕಾಶನದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಲೇಖಕ ಪೃಥ್ವಿರಾಜ್ ಎನ್. ಸದಲ್ಲಿ ಅವರ ನಮ್ಮ ಭಾರತದ ಸ್ವಾತಂತ್ರ್ಯ ಹೋರಾಟಗಾರರು ಕೃತಿಯ ಬಿಡುಗಡೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯ ದೊರೆತ ದಶಕಗಳ ಬಳಿಕವೂ ಇಂದಿನ ಯುವಜನತೆ ಮತ್ತು ವಿದ್ಯಾರ್ಥಿಗಳಲ್ಲಿ ದೇಶಭಕ್ತಿ, ರಾಷ್ಟ್ರಪ್ರೇಮ ಹಾಗೂ ಸಾಮಾಜಿಕ ಹೊಣೆಗಾರಿಕೆಯ ಮೌಲ್ಯಗಳನ್ನು ಬಲಪಡಿಸುವ ಅಗತ್ಯವಿದೆ. ಅದಕ್ಕಾಗಿ ಸ್ವಾತಂತ್ರ್ಯ ಹೋರಾಟ ಗಾರರ ಜೀವನ, ಹೋರಾಟ ಮತ್ತು ಬಲಿದಾನವನ್ನು ಪರಿಚಯಿಸುವ ಪುಸ್ತಕಗಳು ಮನೆ-ಮನೆಗೂ ಹಾಗೂ ಶಾಲಾ-ಕಾಲೇಜು ಗ್ರಂಥಾಲಯಗಳಿಗೂ

3 ನೇ ಪುಟಕ್ಕೆ

ವಿಶ್ವ ಸ್ತನಪಾನ ಸಪ್ತಾಹ. ಮಗುವಿಗೆ ತಾಯಿ ಹಾಲೇ ಶ್ರೇಷ್ಠ-ಡಾ.ಮೃತ್ಯುಂಜಯ



ಸಿರವಾರ.ಅ.4-


ತಾಯಿಯ ಎದೆ ಹಾಲು ಮಗುವಿ ಗೆ ಅಮೃತಕ್ಕೆ ಸಮವಾಗಿದೆ, ಬೇರೆ ಹಾಕು ಮಕ್ಕಳಿಗೆ ಕುಡಿಸಬಾರದು, ಒಂದು ವೇಳೆ ಕುಡಿಸಿದರೆ ಮಗುವಿನ ಬೆಳವಣಿಗೆಗೆ ತೊಂದರೆಯಾಗುತ್ತದೆ ಎಂದು ಸಮುದಾಯ ಆರೋಗ್ಯ ಕೇಂದ್ರದ ಸ್ತ್ರೀ ರೋಗ ತಜ್ಞರಾದ ಡಾ. ಮೃತ್ಯುಂಜಯ ಹೇಳಿದರು. ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವಿಶ್ವ ಸ್ತನ ಪಾನ ಸಪ್ತಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಕಾರ್ಯಕ್ರಮವನ್ನು ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿ ನಂತರ ಮಾತಮಾಡಿದ ಅವರು ಎದೆ ಹಾಲಿನ ಮಹತ್ವ ಕುರಿತು ಮಾತನಾಡಿ ಎದೆ ಹಾಲುಣಿಸುವುದರಿಂದ ತಾಯಿಗೆ ಹಾಗೂ ಮಗುವಿಗೆ ಆಗುವ ಲಾಭಗಳ ತಾಯಿ ಎದೆ ಹಾಲಿನಲ್ಲಿ ಮೊದಲ ಬರುವ ಹಾಲಿನಲ್ಲಿ ಕೊಲೆಸ್ಟ್ರಾಂ ಇರುತ್ತದೆ ಇದು ಮಗುವಿಗೆ ರೋಗನಿರೋಧಕ ಶಕ್ತಿಯನ್ನು ಹೊಂದಿರುತ್ತದೆ, ತಾಯಿ ಎದೆ ಹಾಲು ನೀಡದಿದ್ದರೆ ತಾಯಿಗೆ ಸ್ತನ ಕ್ಯಾನ್ಸರ್ ಆಗುವ ತೊಂದರೆ ಇರುತ್ತದೆ ಎದೆ ಹಾಲು , ತಾಯಿ ಮತ್ತು ಮಗುವಿನ ಬಾಂಧವ್ಯವನ್ನು ಹೆಚ್ಚಿಸುತ್ತದೆ ಎದೆ ಹಾಲು ಅಮೃತಕ್ಕೆ ಸಮಾನ ಎಂದು ಹೇಳಿದರು.

. ಸುನಿಲ್ ವೈದ್ಯಾಧಿಕಾರಿಗಳು ಮಾತನಾಡಿ ಎದೆ ಹಾಲನ್ನು ಆರು ತಿಂಗಳವರೆಗೆ ನೀಡಬೇಕು ನಂತರ ಪೂರಕ ಆಹಾರವನ್ನು ಕೊಡಬೇಕು ಆರೋಗ್ಯವಂತ ಗರ್ಭಿಣಿಯಾಗಿ ಆರೋಗ್ಯವಂತ ಮಗುವಿಗೆ ಜನ್ಮ ನೀಡುವುದಾಗಿ ತಿಳಿಸಿದರು ಮಗು ಜನನವಾದ ತಕ್ಷಣವೇ ಎದೆ ಹಾಲನ್ನು ಕುಡಿಸಬೇಕು ಅಥವಾ ಅರ್ಧ ಗಂಟೆ ಒಳಗಾಗಿ ಕುಡಿಸಬೇಕು ತಾಯಿ ಎದೆ ಹಾಲು ಮಗುವಿಗೆ ಮೊದಲನೇ ಲಸಿಕೆ ಇದ್ದಹಾಗೆ ಎದೆ

3 ನೇ ಪುಟಕ್ಕೆ

ಜನಪ್ರತಿನಿಧಿಗಳ ನಿರ್ಲಕ್ಷ್ಯಕ್ಕೆ ರೈತನಿಂದ ತಕ್ಕ ಉತ್ತರ

ಸ್ವಂತ ಖರ್ಚಿನಲ್ಲಿ ರಸ್ತೆ ದುರಸ್ತಿಗಿಳಿದ ಅಮರೇಶ ತ್ಯಾಗಬಾವಿ; ಅಧಿಕಾರಿಗಳ ವಿರುದ್ಧ ಸಾರ್ವಜನಿಕರ ಆಕ್ರೋಶ





ಸಿರವಾರ,ಆ.4-

ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಬೇಸತ್ತು ಸ್ಥಳೀಯ ರೈತ ಮುಖಂಡ ಅಮರೇಶ ತ್ಯಾಗಬಾವಿ ಅವರು ಸ್ವಂತ ಹಣ ವೆಚ್ಚ ಮಾಡಿ ಹದಗೆಟ್ಟ ರಸ್ತೆಯನ್ನು ದುರಸ್ತಿಪಡಿಸಿದ ಘಟನೆ ಸಿರವಾರ ಪಟ್ಟಣದಲ್ಲಿ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ. ಈ ಬೆಳವಣಿಗೆ ಜನಪ್ರತಿನಿಧಿಗಳ ಕಾರ್ಯವೈಖರಿಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟು ಹಾಕಿದ್ದು, ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸಿರವಾರ ಬೆಳಗಾವಿ ಮುಖ್ಯ ರಸ್ತೆಯು ಪಟ್ಟಣ ವ್ಯಾಪ್ತಿಯಲ್ಲೇ ಸಂಪೂರ್ಣ ಹಾಳಾಗಿದ್ದು, ಇತ್ತೀಚಿನ ಮಳೆಯಿಂದ ರಸ್ತೆಯಲ್ಲಿ ಭಾರೀ ಗುಂಡಿಗಳು ಉಂಟಾಗಿ ವಾಹನ ಸವಾರರು, ವಿದ್ಯಾರ್ಥಿಗಳು ಹಾಗೂ ಪಾದಚಾರಿಗಳು ನಿತ್ಯ ಜೀವದ ಹಂಗು ತೊರೆದು ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ರಸ್ತೆ ದುರಸ್ತಿಗೆ ಹಲವು ಬಾರಿ ಸ್ಥಳೀಯ ಶಾಸಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಅಮರೇಶ ತ್ಯಾಗಬಾವಿ ಅವರು ಸ್ವತಃ ಜೆಲ್ಲಿ, ಮಣ್ಣು ಸೇರಿದಂತೆ ಅಗತ್ಯ ಸಾಮಗ್ರಿಗಳನ್ನು ತರಿಸಿ ರಸ್ತೆ ದುರಸ್ತಿ ಕಾರ್ಯ ಆರಂಭಿಸಿದರು.

ರೈತನ ಈ ಸಾಮಾಜಿಕ ಕಾಳಜಿಯ ಕಾರ್ಯಕ್ಕೆ ಸಾರ್ವಜನಿಕರು ಭಾರೀ ಮೆಚ್ಚುಗೆ ವ್ಯಕ್ತಪಡಿಸಿದ್ದು, ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕಾದ ಜನಪ್ರತಿನಿಧಿಗಳು ಮೌನವಾಗಿರುವುದು ವಿಷಾದನೀಯ ಎಂದು ಕಿಡಿಕಾರಿದ್ದಾರೆ. ಜನರ ತೆರಿಗೆ ಹಣದಿಂದ ರಸ್ತೆ ನಿರ್ಮಾಣ ಹಾಗೂ ನಿರ್ವಹಣೆ ಆಗಬೇಕಾದರೆ, ಇಂದು ರೈತನೇ ತನ್ನ ಸ್ವಂತ ಹಣ ಖರ್ಚು ಮಾಡಿ ರಸ್ತೆ

3 ನೇ ಪುಟಕ್ಕೆ

ತುಂಗಭದ್ರಾ, ಎಡದಂಡೆ ಕಾಲುವೆಗೆ ಕೂಡಲೇ ನೀರು ಹರಿಸಿ; ಬೆಳೆ ಉಳಿಸಿ: ರೈತರ ವೇದಿಕೆ ಸರ್ಕಾರಕ್ಕೆ ಆಗ್ರಹ



ರಾಯಚೂರು,ಆ.4-

2026-27ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆಗಳನ್ನು ಸಂರಕ್ಷಿಸುವ ದೃಷ್ಟಿಯಿಂದ ತುಂಗಭದ್ರಾ, ಎಡದಂಡೆ ಮುಖ್ಯ ಕಾಲುವೆಗೆ ತಕ್ಷಣ ನೀರು ಹರಿಸುವಂತೆ ರಾಜ್ಯ ಸರ್ಕಾರ ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳಿಗೆ ತುಂಗಭದ್ರಾ, ಎಡದಂಡೆ ಕಾಲುವೆ ರೈತರ ವೇದಿಕೆ ಆಗ್ರಹಿಸಿದೆ.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವೇದಿಕೆಯ ಮುಖಂಡ ಶಂಕರಗೌಡ ಹರವಿ, ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ತುಂಗಭದ್ರಾ ಜಲಾಶಯಕ್ಕೆ ಒಳಹರಿವು ಕಡಿಮೆಯಿದ್ದರೂ, ಮಳೆಗಾಲ ಇನ್ನೂ ಮುಂದುವರಿದಿರುವುದರಿಂದ ಮುಂದಿನ ದಿನಗಳಲ್ಲಿ ಉತ್ತಮ ಪ್ರಮಾಣದ ನೀರು ಹರಿದು ಬರುವ ನಿರೀಕ್ಷೆ ಇದೆ ಎಂದು ತಿಳಿಸಿದರು.

1970-80ರ ದಶಕಗಳಲ್ಲಿ ಜಲಾಶಯದಲ್ಲಿ 25ರಿಂದ 30 ದಿನಗಳಿಗೆ ಸಾಕಾಗುವಷ್ಟು ನೀರು ಸಂಗ್ರಹವಾದ ತಕ್ಷಣವೇ ನೀರಾವರಿ ಕಾಲುವೆಗಳಿಗೆ ನೀರು ಹರಿಸಲಾಗುತ್ತಿತ್ತು. ಬಳಿಕ ಬಂದ ಹೆಚ್ಚುವರಿ ಒಳಹರಿವಿನಿಂದ ಯಾವುದೇ ಸಮಸ್ಯೆ ಉಂಟಾಗುತ್ತಿರಲಿಲ್ಲ. ಆದರೆ ಈಗ ಅಧಿಕಾರಿಗಳು ಅತಿಯಾದ ಮುನ್ನೆಚ್ಚರಿಕೆ ಹಾಗೂ ರಕ್ಷಣಾತ್ಮಕ ಧೋರಣೆ ಅನುಸರಿಸುತ್ತಿರುವುದರಿಂದ ಕಾಲುವೆಗೆ ನೀರು ಹರಿಸುವಲ್ಲಿ

3 ನೇ ಪುಟಕ್ಕೆ

ರಾಯಚೂರಿಗೆ ಸಚಿವ ಸ್ಥಾನ ವಂಚನೆ: ಸ್ವಾತಂತ್ರ್ಯ ದಿನವೇ ಹೋರಾಟ

ಧ್ವಜಾರೋಹಣಕ್ಕೆ ಬೇರೆ ಜಿಲ್ಲೆಯ ಸಚಿವರು ಬಂದರೆ ಪ್ರತಿಭಟನೆ - ದಲಿತ ಪರ ಸಂಘಟನೆಗಳ ಎಚ್ಚರಿಕೆ



ರಾಯಚೂರು,ಆ.4-


ಸಚಿವ ಸಂಪುಟ ವಿಸ್ತರಣೆಯಲ್ಲಿ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳಿಗೆ ಸಚಿವ ಸ್ಥಾನ ನೀಡದಿರುವುದನ್ನು ಖಂಡಿಸಿ ದಲಿತ ಪರ ಸಂಘಟನೆಗಳ ಒಕ್ಕೂಟ ಆಗಸ್ಟ್ 15ರಂದು ಸ್ವಾತಂತ್ರ್ಯ ದಿನಾಚರಣೆಯಂದೇ ಮಹಾತ್ಮ ಗಾಂಧಿ ಕ್ರೀಡಾಂಗಣದ ಬಳಿ ಬೃಹತ್ ಪ್ರತಿಭಟನೆ ನಡೆಸಲು ಕರೆ ನೀಡಿದೆ. ಜಿಲ್ಲೆಯ ಜನಪ್ರತಿನಿಧಿಗಳಿಗೇ ಸಚಿವ ಸ್ಥಾನ ಹಾಗೂ ಉಸ್ತುವಾರಿ ಸಚಿವರ ಜವಾಬ್ದಾರಿ ನೀಡಬೇಕು. ಇಲ್ಲದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಸಂಘಟನೆ ಎಚ್ಚರಿಕೆ ನೀಡಿದೆ.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ಮುಖಂಡ ಎಸ್. ಮಾರೆಪ್ಪ, ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ಕಾರ್ಯಕ್ರಮಕ್ಕೆ ಬೇರೆ ಜಿಲ್ಲೆಯ ಸಚಿವರು ಆಗಮಿಸಿದರೆ ಕಪ್ಪುಬಾವುಟ ಪ್ರದರ್ಶಿಸಿ ಪ್ರತಿಭಟನೆ ನಡೆಸಲಾಗುವುದು. ಜಿಲ್ಲೆಯ ಜನರ ಸ್ವಾಭಿಮಾನವನ್ನು ನಿರ್ಲಕ್ಷ್ಯ ಮಾಡುವ ಯಾವುದೇ ಕ್ರಮವನ್ನು ಸಹಿಸುವುದಿಲ್ಲ ಎಂದು ಹೇಳಿದರು.

3 ನೇ ಪುಟಕ್ಕೆ

ಕಲ್ಯಾಣ ಕರ್ನಾಟಕಕ್ಕೆ ಸಚಿವ ಸಂಪುಟದಲ್ಲಿ ಅನ್ಯಾಯ

ರಾಯಚೂರಿಗೆ 'ಚೊಂಬು' ಕೊಟ್ಟ ಸರ್ಕಾರ - ರಾಘವೇಂದ್ರ ಕುಷ್ಟಗಿ



ರಾಯಚೂರು, ಆ.4-

ರಾಜ್ಯ ಸಚಿವ ಸಂಪುಟ ಪುನರ್ ರಚನೆಯಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ತೀವ್ರ ಅನ್ಯಾಯವಾಗಿದ್ದು, ವಿಶೇಷವಾಗಿ ರಾಯಚೂರು ಜಿಲ್ಲೆಗೆ ಸಚಿವ ಸ್ಥಾನ ನೀಡದೆ ಕಾಂಗ್ರೆಸ್ ಸರ್ಕಾರ 'ಚೊಂಬು' ಕೊಟ್ಟಿದೆ ಎಂದು ಕಲ್ಯಾಣ ಕರ್ನಾಟಕ ಪ್ರದೇಶ ಸಮಿತಿಯ ಸಂಸ್ಥಾಪಕ ರಾಘವೇಂದ್ರ ಕುಷ್ಟಗಿ ತೀವ್ರ ವಾಗ್ದಾಳಿ ನಡೆಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಂಜುಂಡಪ್ಪ ವರದಿ ಅನ್ವಯ ಕಲ್ಯಾಣ ಕರ್ನಾಟಕ ಭಾಗಕ್ಕೆ ಆದ್ಯತೆ ಹಾಗೂ ಸಚಿವ ಸಂಪುಟದಲ್ಲಿ ಕನಿಷ್ಠ ಶೇ.10ರಷ್ಟು ಪ್ರಾತಿನಿಧ್ಯ ನೀಡಬೇಕಾಗಿದ್ದರೂ ಸರ್ಕಾರ ಆ ಕರ್ತವ್ಯವನ್ನು ನಿರ್ಲಕ್ಷಿಸಿದೆ ಎಂದು ಆರೋಪಿಸಿದರು. ಕಲಬುರಗಿ ಜಿಲ್ಲೆಗೆ ಹೆಚ್ಚಿನ ಪ್ರಾತಿನಿಧ್ಯ ನೀಡಿರುವ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕದೊಳಗೇ ಒಳಮೀಸಲಾತಿ ಕುರಿತು ಚರ್ಚೆ ನಡೆಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ಪ್ರಾದೇಶಿಕ ಅಸಮತೋಲನ ನಿವಾರಿಸಿ ಎಲ್ಲ ಜಿಲ್ಲೆಗಳಿಗೂ ಸಮಾನ ಅವಕಾಶ ನೀಡಿದಾಗ ಮಾತ್ರ ಸಮಗ್ರ ಅಭಿವೃದ್ಧಿ ಸಾಧ್ಯ. ಆದರೆ ಸರ್ಕಾರ ಕೆಲವೇ ಜಿಲ್ಲೆಗಳು ಮತ್ತು ಸಮುದಾಯಗಳಿಗೆ ಆದ್ಯತೆ ನೀಡಿದ್ದು, ಹಿಂದುಳಿದ ಜಿಲ್ಲೆಗಳ ನಿರೀಕ್ಷೆಗೆ ಧಕ್ಕೆ ತಂದಿದೆ ಎಂದು ಅವರು ಹೇಳಿದರು.

ರಾಹುಲ್ ಗಾಂಧಿ ಮಹಿಳಾ ಸಬಲೀಕರಣ ಮತ್ತು ಪ್ರಾದೇಶಿಕ ಸಮಾನತೆಯ ಕುರಿತು ಮಾತನಾಡುತ್ತಿದ್ದರೂ, ಸಚಿವ ಸಂಪುಟ ವಿಸ್ತರಣೆಯಲ್ಲಿ ಒಬ್ಬ ಮಹಿಳೆಗೂ ಅವಕಾಶ ನೀಡದಿರುವುದು ಹಾಗೂ ಕೆಲವೇ ಸಮುದಾಯಗಳಿಗೆ ಆದ್ಯತೆ ನೀಡಿರುವುದು ಕಾಂಗ್ರೆಸ್ ಪಕ್ಷಕ್ಕೆ ಮುಂದಿನ ದಿನಗಳಲ್ಲಿ ರಾಜಕೀಯ ಹಿನ್ನಡೆ ತರಲಿದೆ ಎಂದು ಎಚ್ಚರಿಸಿದರು.

ರಾಯಚೂರು-ಯಾದಗಿರಿ ಲೋಕಸಭಾ ಕ್ಷೇತ್ರಕ್ಕೆ ಸಚಿವ ಸ್ಥಾನ ಸಿಗದಿರುವುದಕ್ಕೆ ಸ್ಥಳೀಯ ನಾಯಕರ ಒಳಜಗಳವೂ ಕಾರಣವಾಗಿರಬಹುದು ಎಂಬ ಚರ್ಚೆಗಳಿದ್ದು, ಜಿಲ್ಲೆಯ ಹಿತಕ್ಕಿಂತ ವೈಯಕ್ತಿಕ ಭಿನ್ನಾಭಿಪ್ರಾಯಗಳಿಗೆ ಆದ್ಯತೆ ನೀಡಿರುವುದು ದುಃಖಕರ ಎಂದು ಹೇಳಿದರು. ಈಗ ರಚನೆಯಾಗಿರುವ ಸಚಿವ ಸಂಪುಟವನ್ನು ಅಪ್ರಯೋಜಕ ಸಂಪುಟ ಎಂದು ಟೀಕಿಸಿದ ಅವರು, ರಾಯಚೂರು ಜಿಲ್ಲೆಗೆ ತಕ್ಷಣ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿದರು.

ಮುಖಂಡ ಚಾಮರಸ ಪಾಟೀಲ್ ಮಾತನಾಡಿ, ಕಾಂಗ್ರೆಸ್‌ಗೆ ಈ ಭಾಗದ ಜನತೆ ಉತ್ತಮ ಬೆಂಬಲ ನೀಡಿದ್ದರೂ ಸಚಿವ ಸ್ಥಾನ ನೀಡದೆ ಅನ್ಯಾಯ ಮಾಡಲಾಗಿದೆ. ಈ

3 ನೇ ಪುಟಕ್ಕೆ

ಬಸ್ ವಿಳಂಬ ಖಂಡಿಸಿ ವಿದ್ಯಾರ್ಥಿಗಳ ಪ್ರತಿಭಟನೆ; ಕೆಲಕಾಲ ಬಸ್ ತಡೆದು ಆಕ್ರೋಶ



ಸಂಡೂರು/ಬಳ್ಳಾರಿ, ಆ.4-

ಜಿಲ್ಲೆಯ ಸಂಡೂರು ತಾಲೂಕಿನ ನಿಡುಗುರ್ತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಿರೇನಹಳ್ಳಿ-ಹುಲಿಕುಂಟೆ ಮಾರ್ಗದಲ್ಲಿ ಸಂಚರಿಸುವ ಬಸ್ ನಿಗದಿತ ಸಮಯಕ್ಕೆ ಆಗಮಿಸದ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಕಾಟನಿಕಂಬ ಗ್ರಾಮದ ಬಸ್ ನಿಲ್ದಾಣದಲ್ಲಿ ಸೋಮವಾರ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿದಿನ ಶಾಲೆ ಹಾಗೂ ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳು ಬಸ್ ವಿಳಂಬದಿಂದ ತೀವ್ರ ತೊಂದರೆ ಅನುಭವಿಸುತ್ತಿದ್ದು, ಸಮಯಕ್ಕೆ ಸರಿಯಾಗಿ ತರಗತಿಗಳಿಗೆ ಹಾಜರಾಗಲು ಸಾಧ್ಯವಾಗುತ್ತಿಲ್ಲ ಎಂದು ಆರೋಪಿಸಿದರು. ಈ ಕುರಿತು ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರೂ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಕಾಟನಿಕಂಬ ಗ್ರಾಮದ ಬಸ್ ನಿಲ್ದಾಣದಲ್ಲಿ ಕೆಲಕಾಲ ಬಸ್ ತಡೆದು ಪ್ರತಿಭಟನೆ ನಡೆಸಿದರು. ಪರಿಣಾಮ ಮಾರ್ಗದಲ್ಲಿ ಕೆಲ ಸಮಯ ಸಂಚಾರ ಅಸ್ತವ್ಯಸ್ತಗೊಂಡಿತು. ಬಸ್ ಸೇವೆಯನ್ನು ನಿಗದಿತ ವೇಳಾಪಟ್ಟಿಯಂತೆ ನಿಯಮಿತವಾಗಿ ನಡೆಸುವಂತೆ ವಿದ್ಯಾರ್ಥಿಗಳು ಆಗ್ರಹಿಸಿದರು.

ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿದ ಗ್ರಾಮದ ಹಿರಿಯರು ಹಾಗೂ ಗ್ರಾಮಸ್ಥರು ವಿದ್ಯಾರ್ಥಿಗಳೊಂದಿಗೆ ಮಾತುಕತೆ ನಡೆಸಿ ಪರಿಸ್ಥಿತಿಯನ್ನು ಶಾಂತಗೊಳಿಸಿದರು. ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆ ಬಗೆಹರಿಸುವ ಭರವಸೆ ನೀಡಿದ ಬಳಿಕ ವಿದ್ಯಾರ್ಥಿಗಳು ಪ್ರತಿಭಟನೆ ಹಿಂಪಡೆದರು. ನಂತರ ಬಸ್ ಸಂಚಾರ ಪುನರಾರಂಭವಾಯಿತು.

ಗಣಕಯಂತ್ರ ಶಿಕ್ಷಣ ಪರೀಕ್ಷೆ: ಪರೀಕ್ಷಾ ಕೇಂದ್ರದ ಸುತ್ತ 200 ಮೀಟರ್ ವ್ಯಾಪ್ತಿ ನಿಷೇಧಿತ ಪ್ರದೇಶ ಘೋಷಣೆ

ವಿಜಯನಗರ, ಆ.4-

ಆಗಸ್ಟ್ 3ರಿಂದ 7ರವರೆಗೆ ಕೊಟ್ಟೂರು ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆಯಲಿರುವ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಹಿನ್ನೆಲೆಯಲ್ಲಿ ಪರೀಕ್ಷಾ ಕೇಂದ್ರದ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯನ್ನು ನಿರ್ಬಂಧಿತ ಪ್ರದೇಶವೆಂದು ಘೋಷಿಸಲಾಗಿದೆ.



ಈ ಅವಧಿಯಲ್ಲಿ ಪರೀಕ್ಷಾ ಕೇಂದ್ರದ ಸುತ್ತಲಿನ ಜೆರಾಕ್ಸ್ ಕೇಂದ್ರಗಳು, ಕಂಪ್ಯೂಟರ್ ಹಾಗೂ ಸೈಬರ್ ಅಂಗಡಿಗಳನ್ನು ಮುಚ್ಚುವಂತೆ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಆದೇಶಿಸಿದ್ದಾರೆ.

ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷಾರ್ಥಿಗಳು, ಪರೀಕ್ಷಾ ಉಸ್ತುವಾರಿ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಹೊರತುಪಡಿಸಿ ಸಾರ್ವಜನಿಕರು, ಅನಧಿಕೃತ ವ್ಯಕ್ತಿಗಳು ಅಥವಾ ಯಾವುದೇ ಗುಂಪಿನ ಸದಸ್ಯರಿಗೆ ಪ್ರವೇಶವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಆದೇಶವನ್ನು ಉಲ್ಲಂಘಿಸಿ ನಿಷೇಧಿತ ಪ್ರದೇಶಕ್ಕೆ ಪ್ರವೇಶಿಸುವವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ, ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಎಚ್ಚರಿಕೆ ನೀಡಿದ್ದಾರೆ.

ಸಂಚಾರ ಸುಗಮ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಒತ್ತು ನೀಡಲು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅಧಿಕಾರಿಗಳಿಗೆ ತಾಕೀತು



ಬಳ್ಳಾರಿ,ಆ,04-

ನಗರದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆ ನಿಯಂತ್ರಣ, ಸಾರ್ವಜನಿಕ ಸಾರಿಗೆ ವ್ಯವಸ್ಥೆಯ ಸುಧಾರಣೆ ಹಾಗೂ ರಸ್ತೆಗಳ ಪರಿಶೀಲನೆ, ಸಿಗ್ನಲ್ ಹಾಗೂ ವೇಗ ಮಿತಿ ಮರು ಪರಿಶೀಲನೆ, ಮೂಲಸೌಕರ್ಯಗಳ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದು ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧಿಕಾರಿಗಳಿಗೆ ತಾಕೀತು ಮಾಡಿದರು.

ನಗರದ ನೂತನ ಜಿಲ್ಲಾಡಳಿತ ಭವನದ ವಿಡೀಯೋ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಮುಖ್ಯ ರಸ್ತೆಗಳಲ್ಲಿ ಭಾರಿ ಸರಕು ಮತ್ತು ಸಾರಿಗೆ ವಾಹನಗಳ ದಟ್ಟಣೆಯನ್ನು ಕಡಿಮೆ ಮಾಡಲು ಚೆಕ್‌ಪೋಸ್ಟ್ ಗಳು ಹಾಗೂ ಬೈಪಾಸ್ ರಸ್ತೆಗಳ ಮೂಲಕ ಮಾರ್ಗ ಬದಲಾವಣೆ ಮಾಡಬೇಕು. ಹೊಸಪೇಟೆ ಬೈಪಾಸ್ ರಸ್ತೆಯ ಸುತ್ತಮುತ್ತಲಿನ ಸೈಡ್ ರೋಡ್‌ಗಳಲ್ಲಿ ಭಾರಿ ವಾಹನಗಳನ್ನು ಡೈವರ್ಟ್ ಮಾಡಿ ನಗರದೊಳಗಿನ ಟ್ರಾಫಿಕ್ ಒತ್ತಡವನ್ನು ಕಡಿಮೆ ಮಾಡಲು ಕ್ರೀಯಾಯೋಜನೆ ಸಿದ್ದಪಡಿಸುವಂತೆ ಸಂಬಧಿಸಿದ ಅಧಿಕಾರಿಗಳಿಗೆ ನಿರ್ದೇಶಿಸಿದರು.

ನಗರದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸಲು ಹಾಗೂ ರಸ್ತೆ ಪಕ್ಕದಲ್ಲಿ ಬಸ್‌ಗಳನ್ನು ಎಲ್ಲೆಂದರಲ್ಲಿ ನಿಲ್ಲಿಸುವುದನ್ನು ತಡೆಯಲು 13 ಪ್ರಮುಖ ಸ್ಥಳಗಳಲ್ಲಿ ನೂತನ ಬಸ್ ಬೇ ನಿರ್ಮಿಸಲು ಗುರುತಿಸಲಾಗಿದೆ. ಪಾಲಿಕೆಯಿಂದ ಬಸ್ ಬೇ ಗಳನ್ನು ನೇರವಾಗಿ ನಿರ್ಮಿಸಲು ಎದುರಾಗುವ ತಾಂತ್ರಿಕ/ಆಡಳಿತಾತ್ಮಕ ಸವಾಲುಗಳಿದ್ದು, ಈ ಕುರಿತು ಲೋಕೋಪಯೋಗಿ ಇಲಾಖೆ ಹಾಗೂ ಪಾಲಿಕೆ ಇಂಜಿನಿಯರ್‌ಗಳು ಜಂಟಿಯಾಗಿ ಪರಿಶೀಲಿಸಿ, ಬಸ್ ಬೇ ನಿರ್ಮಾಣಕ್ಕೆ ಅಗತ್ಯವಿರುವ ಜಾಗದ ಲಭ್ಯತೆ ಕುರಿತು ವರದಿ ನೀಡಿದ ತಕ್ಷಣವೇ ಮುಂದಿನ ಯೋಜನಾ ಕೆಲಸಗಳನ್ನು ಕೈಗೆತ್ತಿಕೊಳ್ಳಬೇಕು ಎಂದು ಸಮ್ಮತಿಸಿದರು.

ನಗರದಾದ್ಯಂತ ಸಂಚಾರ ಸುರಕ್ಷತೆಯನ್ನು ಕಾಯ್ದುಕೊಳ್ಳಲು ವೇಗ ಮಿತಿ ಹಾಗೂ ಸ್ಕೂಲ್ ಝೋನ್ ಸೂಚನಾ ಫಲಕಗಳನ್ನು ಅಳವಡಿಸಬೇಕು. ಶಾಲೆಗಳು ಹಾಗೂ ಆಸ್ಪತ್ರೆಗಳಿರುವ ಸೂಕ್ಷ್ಮ ಪ್ರದೇಶಗಳಲ್ಲಿ ಗರಿಷ್ಠ ವೇಗವನ್ನು 40 ಕಿ.ಮೀ/ಗಂಟೆಗೆ ನಿಗದಿಪಡಿಸಿ ಬೋರ್ಡ್‌ಗಳನ್ನು ಹಾಕಬೇಕು. ಸಂಚಾರ ವಿಭಾಗ ಹಾಗೂ ಸಿವಿಲ್ ಇಲಾಖೆಯ ಜಂಟಿ ಪರಿಶೀಲನೆ ನಂತರ ವೇಗ ಮಿತಿಯ ಅಧಿಸೂಚನೆಯನ್ನು ಹೊರಡಿಸಲಾಗುತ್ತದೆ. ವರದಿ ಬಂದ ನಂತರ ಒಂದು ವಾರದೊಳಗೆ ಅಗತ್ಯ ಸ್ಥಳಗಳಲ್ಲಿ ವೇಗ ಮಿತಿ ಬೋರ್ಡ್‌ಗಳನ್ನು ಕಡ್ಡಾಯವಾಗಿ ಸ್ಥಾಪಿಸಬೇಕು ಎಂದು ತಿಳಿಸಿದರು.

ಫುಟ್‌ಪಾತ್ ಅತಿಕ್ರಮಣ ತೆರವು ಕಾರ್ಯಾಚರಣೆ ನಡೆಸಿ:

ಸಾರ್ವಜನಿಕರ ಸುರಕ್ಷಿತ ಪಾದಚಾರಿ ಸಂಚಾರಕ್ಕೆ ಅಡ್ಡಿಯಾಗಿರುವ ಫುಟ್‌ಪಾತ್ ಅತಿಕ್ರಮಣಗಳನ್ನು ತೆರವುಗೊಳಿಸಲು ಮಹಾನಗರ ಪಾಲಿಕೆ ಅಭಿವೃದ್ಧಿ ಅಧಿಕಾರಿಗಳು, ಎಂಜಿನಿಯರ್‌ಗಳು ಹಾಗೂ ಸ್ಥಳೀಯ ಪೊಲೀಸರನ್ನು ಒಳಗೊಂಡ ವಿಶೇಷ ತಂಡವನ್ನು ರಚಿಸಿ ಕಟ್ಟುನಿಟ್ಟಿನ ಅತಿಕ್ರಮಣ ತೆರವು ಕಾರ್ಯಾಚರಣೆ ನಡೆಸಬೇಕು ಎಂದು ಸೂಚಿಸಿದರು.

ರೈಲ್ವೆ ಸರಕು ಸಾಗಣೆ ಸಮಯದ ಸಮನ್ವಯ: ರೈಲ್ವೇ ಗೂಡ್ಸ್ ಗಾಡಿಗಳ ಮುಖಾಂತರ ಬರುವ ಸಿಮೆಂಟ್ ಹಾಗೂ ರಸಗೊಬ್ಬರ ಲೋಡಿಂಗ್/ಅನ್‌ಲೋಡಿಗ್ ಸರಕು ರೈಲುಗಳಿಂದ ನಗರದಲ್ಲಿ ಸಂಚಾರಕ್ಕೆ ಅಡಚಣೆಯಾಗುತ್ತಿದೆ ಎಂದು ಸಂಚಾರ ಪೊಲೀಸ್ ಅಧಿಕಾರಿಗಳು ಸಭೆಯಲ್ಲಿ ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಯವರು, ರೈಲ್ವೇ ಇಲಾಖೆಯಿಂದ ಸರಕು ರೈಲುಗಳು ಆಗಮಿಸುವ ಮತ್ತು ನಿರ್ಮಿಸುವ ನಿಖರ ಸಮಯದ ಮಾಹಿತಿ ಪಡೆದುಕೊಳ್ಳಬೇಕು. ನಗರದಲ್ಲಿ ಸಂಚಾರ ದಟ್ಟಣೆ ತಡೆಯಲು, ಪೀಕ್ ಅವರ್ ಹೊರತುಪಡಿಸಿ ಸಾಗಣೆ ಮಾಡಲು ಸಾಧ್ಯವೇ ಎಂಬುದರ ಕುರಿತು ರೈಲ್ವೇ ಸ್ಟೇಷನ್ ಮಾಸ್ಟರ್ ಹಾಗೂ ಸಂಬಧಿಸಿದ ಅಧಿಕಾರಿಗಳೊಂದಿಗೆ ತಕ್ಷಣವೇ ಸಮನ್ವಯ ಸಭೆ ನಡೆಸಬೇಕು ಎಂದು ತಿಳಿಸಿದರು.

ಲಾರಿ ಟರ್ಮಿನಲ್ ನೈರ್ಮಲ್ಯ ಹಾಗೂ ಲೈಟಿಂಗ್ ನಿರ್ವಹಣೆ:

ನಗರದ ಟ್ರಕ್ ಟರ್ಮಿನಲ್‌ನಲ್ಲಿ ಮೂಲಸೌಕರ್ಯ ಹಾಗೂ ನೈರ್ಮಲ್ಯ ಕೊರತೆ ಕಂಡುಬದಿದೆ. ಟರ್ಮಿನಲ್ ಆವರಣದಲ್ಲಿ ಲೈಟಿಂಗ್ ವ್ಯವಸ್ಥೆಯನ್ನು ಸರಿಪಡಿಸುವುದು ಮತ್ತು ನಿಯಮಿತ ನೈರ್ಮಲ್ಯ ಕಾಪಾಡುವುದು ಅತ್ಯಗತ್ಯ ಎಂದು ಜಿಲ್ಲಾಧಿಕಾರಿಯವರು ಹೇಳಿದರು.

ಇದೇ ವೇಳೆ ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ್ ಅವರು, ಟರ್ಮಿನಲ್ ನಿರ್ವಹಣೆಯಿಂದ ವಸೂಲಾಗುವ ತೆರಿಗೆ ಮತ್ತು ನಿಧಿಯ ಕುರಿತು ಪರಿಶೀಲಿಸಿ, ಕೆಕೆಆರ್‌ಟಿಸಿ ಹಾಗೂ ಸ್ಥಳೀಯ ಸಾರಿಗೆ ಸಂಸ್ಥೆಗಳೊದಿಗೆ ಸಮಾಲೋಚನೆ ನಡೆಸಿ, ನಿಗದಿತ ಸುಂಕದ ಆಧಾರದಲ್ಲಿ ಟರ್ಮಿನಲ್ ಮೂಲಸೌಕರ್ಯಗಳನ್ನು ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು.

ಸಂಚಾರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ರುದ್ರಪ್ಪ ಅವರು ಮಾತನಾಡಿ, ಆಗಸ್ಟ್ 15 ರಿಂದ ನಗರದಲ್ಲಿ ಸಂಚರಿಸುವ ಆಟೋಗಳ ದಾಖಲೆಗಳು, ಪರವಾನಗಿ ಮತ್ತು ನಿಯಮ ಉಲ್ಲಂಘನೆಗಳನ್ನು ತಪಾಸಣೆ ಮಾಡಲು ವಿಶೇಷ ಡ್ರೈವ್' ನಡೆಸಲಾಗುವುದು. ನಿಯಮ ಮೀರಿದ ಮತ್ತು ಬಿಳಿ ಬೋರ್ಡ್ ಬಳಸಿ ಅನಧಿಕೃತವಾಗಿ ಸಂಚರಿಸುವ ವಾಹನಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ನಗರದಲ್ಲಿ ಆಟೋ ಚಾಲಕರು ರಾತ್ರಿಯ ಸಮಯದಲ್ಲಿ ಪ್ರಯಾಣಿಕರಿಂದ ರೂ.300, 400 ಅಥವಾ 500 ರಂತೆ ಅತಿಯಾದ ಬಾಡಿಗೆ ವಸೂಲಿ ಮಾಡುತ್ತಿರುವ ದೂರುಗಳು ಹೆಚ್ಚಾಗಿವೆ. ಇದನ್ನು ತಡೆಯಲು ಹೊಸ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಮತ್ತು ಬಿಎಂಸಿಆರ್‌ಸಿ ಮುಂಭಾಗದ ವೃತ್ತ ಸೇರಿದಂತೆ ಮೂರೂ ಕಡೆಗಳಲ್ಲಿ ಪ್ರಿಪೇಡ್ ಆಟೋ ಸೇವೆ ಪ್ರಾರಂಭಿಸಲು ತೀರ್ಮಾನಿಸಲಾಗಿದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಪ್ರತಿಕ್ರಿಯಿಸಿ, ನಗರದಲ್ಲಿ ಪ್ರಯಾಣಿಕರ ಹಿತರಕ್ಷಣೆ ಮತ್ತು ಸಂಚಾರ ವ್ಯವಸ್ಥೆಯ ಸುಧಾರಣೆಗಾಗಿ ಶೀಘ್ರದಲ್ಲೇ ಪ್ರಿಪೇಡ್ ಆಟೋ ಸೇವೆಯನ್ನು ಆರಂಭಿಸಬೇಕು. ಮತ್ತು ಅಧಿಕ ಬಾಡಿಗೆ ವಸೂಲಿ ಮಾಡುವ ಆಟೋ ಚಾಲಕರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು. ಕೂಡಲೇ ಆರ್.ಟಿ.ಒ ಅಧಿಕಾರಿಗಳು, ಸಂಚಾರ ಪೊಲೀಸ್ ಇಲಾಖೆ ಹಾಗೂ ಆಟೋ ಚಾಲಕರ ಸಂಘಟನೆಗಳ ಜೊತೆ ಜಂಟಿ ಸಭೆ ನಡೆಸಿ ಸ್ಥಿರ ದರಪಟ್ಟಿ ನಿಗದಿಪಡಿಸಬೇಕು. ಪ್ರಿಪೇಡ್ ಆಟೋ ಸೇವೆ ಆರಂಭವಾದ ನಂತರ ನಾನೇ ಖುದ್ದಾಗಿ ಆಗಮಿಸಿ ಉದ್ಘಾಟನೆ ಮಾಡುವೆ ಎಂದು ಹೇಳಿದರು.

ಖಾಸಗಿ ವ್ಯಕ್ತಿಗಳು ಅಥವಾ ಅನಧಿಕೃತವಾಗಿ ಎಲ್ಲೆಂದರಲ್ಲಿ ಆಟೋ ಸ್ಟ್ಯಾಂಡ್ ನಿರ್ಮಿಸುವುದನ್ನು ತಡೆಯಲು, ಮಹಾನಗರ ಪಾಲಿಕೆ ಹಾಗೂ ಟ್ರಾಫಿಕ್ ಇಲಾಖೆಯ ಇಂಜಿನಿಯರ್‌ಗಳು ಜಂಟಿಯಾಗಿ ಸೂಕ್ತ ಸ್ಥಳಗಳನ್ನು ಗುರುತಿಸಿ ಅಧಿಕೃತ ಬೋರ್ಡ್ ಗಳು, ಬ್ಯಾರಿಕೇಡ್‌ಗಳು ಮತ್ತು ಶೆಡ್‌ಗಳನ್ನು ನಿರ್ಮಿಸಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಅಪಘಾತಗಳನ್ನು ತಡೆಯಲು ಹಾಗೂ ಪಾದಚಾರಿಗಳ ಸುರಕ್ಷತೆಗೆ ಅನುಕೂಲವಾಗುವಂತೆ ಅಗತ್ಯವಿರುವ ಕಡೆ ತಕ್ಷಣವೇ ಸೂಕ್ತ ಸೈನ್ ಬೋರ್ಡ್ ಗಳನ್ನು ಹಾಗೂ ವಾಹನಗಳ ವೇಗ ಚಲನೆ ತಡೆಗೆ ರಸ್ತೆಗಳಲ್ಲಿ ಹಂಪ್ಸ್ ಗಳನ್ನು ವೈಜ್ಞಾನಿಕವಾಗಿ ಅಳವಡಿಸಲು ಸೂಚಿಸಿದರು.

ಸಭೆಯಲ್ಲಿ ತೆಗೆದುಕೊಳ್ಳುವ ಪ್ರತಿಯೊಂದು ನಿರ್ಧಾರವು ಸಾರ್ವಜನಿಕರ ಮೇಲೆ ಮತ್ತು ಅವರ ಸುರಕ್ಷತೆಯ ಮೇಲೆ ನೇರ ಪರಿಣಾಮ ಬೀರುತ್ತದೆ. ಹೀಗಾಗಿ ಇದನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು, ನಿಷ್ಕಾಳಜಿ ವಹಿಸಿದರೆ ಸಹಿಸುವುದಿಲ್ಲ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಬಳ್ಳಾರಿ ವಿಭಾಗದ ಲೋಕೋಪಯೋಗಿ ಇಲಾಖೆಯ ಇಇ ವಿಜಯ ಭಾಸ್ಕರ್ ಎಇಇ ಗವಿಯಪ್ಪ ಸೇರಿದಂತೆ ರಾಜ್ಯ ಮತ್ತು ರಾಷ್ಟಿಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಉಪಸ್ಥಿತರಿ ದ್ದರು.

ವೈದ್ಯ ವೃತ್ತಿ ಉದ್ಯೋಗವಲ್ಲ, ಸಮಾಜ ಸೇವೆಯ ಮಹತ್ತರ ಜವಾಬ್ದಾರಿ: ಡಾ. ರವೀಂದ್ರನಾಥ ಮೇಟಿ



ಕಲಬುರಗಿ,ಆ.04-

ವೈದ್ಯ ವೃತ್ತಿಯು ಕೇವಲ ಉದ್ಯೋಗವಲ್ಲ, ಸಮಾಜ ಸೇವೆಯ ಅತ್ಯುನ್ನತ ಜವಾಬ್ದಾರಿಯಾಗಿದೆ. ಸರ್ಕಾರಿ ವೈದ್ಯರು ಗ್ರಾಮೀಣ ಪ್ರದೇಶ ಸೇರಿದಂತೆ ಸಮಾಜದ ಎಲ್ಲ ವರ್ಗದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ಮೂಲಕ ಆರೋಗ್ಯ ವ್ಯವಸ್ಥೆಯನ್ನು ಸದೃಢಗೊಳಿಸುತ್ತಿದ್ದಾರೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ (ಕೆಜಿಎಂಒಎ) ರಾಜ್ಯಾಧ್ಯಕ್ಷ ಡಾ. ರವೀಂದ್ರನಾಥ ಮೇಟಿ ಹೇಳಿದರು.

ನಗರದ ಸಾಯಿ ಮಂದಿರದ ಸಮೀಪದ ವಿ.ಎಲ್. ಪಾಟೀಲ್ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ವತಿಯಿಂದ ಆಯೋಜಿಸಿದ್ದ 202627ನೇ ಸಾಲಿನ ರಾಷ್ಟ್ರೀಯ ವೈದ್ಯರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದ ಆರೋಗ್ಯ ಕಾಪಾಡುವಲ್ಲಿ ವೈದ್ಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸಾರ್ವಜನಿಕ ಆರೋಗ್ಯ ಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಜನರಿಗೆ ತಲುಪಿಸುವ ನಿಟ್ಟಿನಲ್ಲಿ ವೈದ್ಯರು ತಮ್ಮ ಸೇವಾ ಮನೋಭಾವವನ್ನು ನಿರಂತರವಾಗಿ ಉಳಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಲಬುರಗಿ ವಿಭಾಗದ ವಿಭಾಗೀಯ ಉಪನಿರ್ದೇಶಕರು ಹಾಗೂ ಜಿಲ್ಲಾ ಅಧ್ಯಕ್ಷರಾದ ಡಾ. ಶರಣಬಸಪ್ಪ ಗಣಜಲಖೇಡ್ ಮಾತನಾಡಿ, ವೈದ್ಯರ ವೃತ್ತಿಪರ ಬೆಳವಣಿಗೆ, ಸಂಘದ ಸದಸ್ಯರ ಏಕತೆ ಹಾಗೂ ಸಾರ್ವಜನಿಕ ಆರೋಗ್ಯ ಸೇವೆಯ ಗುಣಮಟ್ಟವನ್ನು ಹೆಚ್ಚಿಸಲು ಎಲ್ಲರೂ ಒಗ್ಗಟ್ಟಿನಿಂದ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ಕಲಬುರಗಿ ವಿಭಾಗೀಯ ಉಪಾಧ್ಯಕ್ಷರು ಹಾಗೂ ಜಿಲ್ಲಾ ಆಸ್ಪತ್ರೆಯ ಆರ್‌ಎಂಒ ಡಾ. ನಾಗರಾಜ ಪಾಟೀಲ ವಿಶೇಷ ಉಪಸ್ಥಿತರಿದ್ದು, ವೈದ್ಯರ ಸೇವೆಯ ಮಹತ್ವವನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಸರ್ಕಾರಿ ವೈದ್ಯಾಧಿಕಾರಿಗಳು ಹಾಗೂ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.ವಿಭಾಗೀಯ ಸಹ ನಿರ್ದೇಶಕರಾದ ಡಾ. ಶಂಕರಪ್ಪ, ಜಿಲ್ಲಾ ಗೌರವಾಧ್ಯಕ್ಷರು ಹಾಗೂ ವಿಭಾಗೀಯ ಉಪನಿರ್ದೇಶಕರಾದ ಡಾ. ಅಂಬಾರಾಯ ರುದ್ರವಾಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ, ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸ ಕರಾದ ಡಾ. ರುಕಿಯಾ ಅಸ್ನಾ ರಬಾ ಹಾಗೂ ಹಿರಿಯ ಶಸ್ತ್ರ ಚಿಕಿತ್ಸ ಕರಾದ ಡಾ. ರಾಜಶೇಖರ ಮಾಲಿ ಉಪಸ್ಥಿತರಿದ್ದು, ಆರೋಗ್ಯ ಕ್ಷೇತ್ರದಲ್ಲಿ ವೈದ್ಯರು ಸಲ್ಲಿಸುತ್ತಿರುವ ನಿಸ್ವಾರ್ಥ ಸೇವೆಯನ್ನು ಶ್ಲಾಘಿಸಿದರು.

ವಿಶೇಷ ಆಹ್ವಾನಿತರಾಗಿ ರಾಜ್ಯ ಉಪಾಧ್ಯಕ್ಷ ಡಾ. ಮೋಹನ್, ವಿಭಾಗೀಯ ಜಂಟಿ ಕಾರ್ಯದರ್ಶಿ ಡಾ. ರುದ್ರಗೌಡ, ರಾಜ್ಯ ಜಂಟಿ ಕಾರ್ಯದರ್ಶಿ ಡಾ. ಸತೀಶ್, ಆಂತರಿಕ ಲೆಕ್ಕ ಪರಿಶೋಧಕಿ ಡಾ. ಶೋಭಾ ಟಿ.ಆರ್., ಸಂಘದ ವ್ಯವಸ್ಥಾಪಕ ಕೃಷ್ಣಪ್ಪ, ಶ್ರೀ ಆಸ್ಪತ್ರೆಯ ಡಾ. ಸಚಿನ್, ಡಾ. ಶ್ವೇತ, ವಿ.ಎಲ್. ಪಾಟೀಲ್ ಆಸ್ಪತ್ರೆಯ ಡಾ. ರವೀಂದ್ರ ಪಾಟೀಲ್, ಸಂಜನಾ ಆಸ್ಪತ್ರೆಯ ಡಾ. ಅಂಬರಪ್ಪ ಜಂಪಾ, ಶಾರದಾಂಬೆ ಆಸ್ಪತ್ರೆಯ ಡಾ. ಗಿರೀಶ್ ಸ್ವಾಮಿ ಹಾಗೂ ಡಾ. ದೀಪ ಸ್ವಾಮಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ವೈದ್ಯರು, ನಿವೃತ್ತ ವೈದ್ಯರು, ವೈದ್ಯರ ಪ್ರತಿಭಾವಂತ ಮಕ್ಕಳು ಹಾಗೂ ವಿವಿಧ ಕ್ರೀಡಾ ಕೂಟ ಗಳಲ್ಲಿ ವಿಜೇತರಾದ ವೈದ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು. ಬಳಿಕ ವೈದ್ಯರು ಹಾಗೂ ಅವರ ಕುಟುಂಬ ಸದಸ್ಯರು ನೀಡಿದ ಸಾಂಸ್ಕೃತಿಕ ಕಾರ್ಯಕ್ರಮಗಳು ಸಮಾರಂಭದ ವಿಶೇಷ ಆಕರ್ಷಣೆಯಾಗಿದ್ದವು. ಕಾರ್ಯಕ್ರಮದ ಯಶಸ್ಸಿಗೆ ಕಲಬುರಗಿ ಶಾಖೆಯ ಉಪಾಧ್ಯಕ್ಷರಾದ ಡಾ. ವಿನೋದಕುಮಾರ ಎಸ್.ಎಚ್., ಡಾ. ಇರ್ಫಾನ್ ಅಲಿ, ಕಾರ್ಯದರ್ಶಿ ಡಾ. ಸಂತೋಷ ಆಲಗೂರ, ಖಜಾಂಚಿ ಡಾ. ದೀಪಕ್ ಕುಮಾರ ರಾಠೋಡ, ಜಂಟಿ ಕಾರ್ಯದರ್ಶಿಗಳಾದ ಡಾ. ಸಂಧ್ಯಾ ಕಾನೇಕರ್ ಹಾಗೂ ಡಾ. ಅಮೃತಾ ಕುಲಕರ್ಣಿ ಸೇರಿದಂತೆ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಶ್ರಮಿಸಿದರು.

ಎಸ್‌ಐಆರ್ ಯಶಸ್ಸಿಗೆ ಬಿಎಲ್‌ಒಗಳಿಗೆ ಮಾಹಿತಿ ನೀಡಿ ಸಹಕರಿಸಿ : ತಹಶೀಲ್ದಾರ್ ನಾಗಯ್ಯ ಹಿರೇಮಠ

ಚಿತ್ತಾಪುರ,ಆ.04-

ಚುನಾವಣಾ ಆಯೋಗದ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಯಶಸ್ವಿಯಾಗಲು ಸಾರ್ವಜನಿಕರು ಬೂತ್ ಮಟ್ಟದ ಅಧಿಕಾರಿಗಳಿಗೆ (ಬಿಎಲ್‌ಒ) ಅಗತ್ಯ ಮಾಹಿತಿ ನೀಡಿ ಸಹಕರಿಸಬೇಕು ಎಂದು ತಹಶೀಲ್ದಾರ್ ನಾಗಯ್ಯ ಹಿರೇಮಠ ಹೇಳಿದರು.



ಪಟ್ಟಣದ ಪ್ರಜಾಸೌಧ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೊನೆಯ ದಿನಾಂಕದವರೆಗೆ ಕಾಯದೆ ಗಣತಿ ನಮೂನೆಗಳನ್ನು ಭರ್ತಿ ಮಾಡಿ ಬಿಎಲ್‌ಒಗಳಿಗೆ ಸಲ್ಲಿಸುವ ಮೂಲಕ ಎಸ್‌ಐಆರ್ ಕಾರ್ಯಕ್ಕೆ ಸಹಕರಿಸುವಂತೆ ಮನವಿ ಮಾಡಿದರು.

ಚಿತ್ತಾಪುರ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 257 ಮತಗಟ್ಟೆಗಳಿದ್ದು, 2,51,226 ಮತದಾರರಿದ್ದಾರೆ. ಎಲ್ಲ ಮತದಾರರಿಗೂ ಗಣತಿ ನಮೂನೆಗಳನ್ನು ವಿತರಿಸಲಾಗಿದ್ದು, ಇದುವರೆಗೆ 1,93,767 ಮತದಾರರು ಭರ್ತಿ ಮಾಡಿ ಸಲ್ಲಿಸಿದ್ದಾರೆ ಎಂದು ತಿಳಿಸಿದರು.

ಎಸ್‌ಐಆರ್ ಪರಿಶೀಲನೆಯಲ್ಲಿ ಗೈರುಹಾಜರಾದವರು 3,764, ಸ್ಥಳಾಂತರಗೊಂಡವರು 32,273, ಮೃತಪಟ್ಟವರು 8,056, ನಕಲಿ ಮತದಾರರು 4,812 ಹಾಗೂ ಇತರೆ 139 ಪ್ರಕರಣಗಳು ದಾಖಲಾಗಿವೆ. ಒಟ್ಟು 49,044 ಪ್ರಕರಣಗಳನ್ನು ಗುರುತಿಸಲಾಗಿದ್ದು, ಇದುವರೆಗೆ 2,42,811 ಮತದಾರರ ಮಾಹಿತಿಯನ್ನು ಸಂಗ್ರಹಿಸಿ ಶೇ.96.65ರಷ್ಟು ಪ್ರಗತಿ ಸಾಧಿಸಲಾಗಿದೆ. ಇನ್ನೂ 8,415 ಮತದಾರರನ್ನು ಸಂಪರ್ಕಿಸಬೇಕಿದೆ ಎಂದು ಮಾಹಿತಿ ನೀಡಿದರು.

ಎಸ್‌ಐಆರ್‌ಗೆ ಸಂಬಂಧಿಸಿದ ಯಾವುದೇ ಸಂಶಯ ಅಥವಾ ಗೊಂದಲಗಳ ನಿವಾರಣೆಗೆ ಪ್ರಜಾಸೌಧದಲ್ಲಿ ವಾರ್ ರೂಂ ಸ್ಥಾಪಿಸಲಾಗಿದ್ದು, 9 ತಹಶೀಲ್ದಾರ್ ಕಚೇರಿ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಹೇಳಿದರು.

ಬಿಎಲ್‌ಒಗಳು ಮನೆ-ಮನೆಗೆ ಭೇಟಿ ನೀಡುವ ವೇಳೆ ಮನೆಯಲ್ಲಿ ಸಿಗದವರು, ಊರು ಬಿಟ್ಟು ಹೋದವರು, ಮೃತಪಟ್ಟವರು ಅಥವಾ ಒಂದಕ್ಕಿಂತ ಹೆಚ್ಚು ಕಡೆ ಹೆಸರು ಹೊಂದಿರುವ ಮತದಾರರನ್ನು ಗುರುತಿಸಿ ಸಂಬಂಧಿತ ವರ್ಗದಡಿ ದಾಖಲಿಸುತ್ತಾರೆ. ಈಗಾಗಲೇ ಸಲ್ಲಿಸಿರುವ ಮಾಹಿತಿಯಲ್ಲಿ ತಿದ್ದುಪಡಿ ಅಗತ್ಯವಿದ್ದರೆ ಅದಕ್ಕೂ ಅವಕಾಶವಿದ್ದು, ಸಾರ್ವಜನಿಕರು ಯಾವುದೇ ಆತಂಕಪಡಬೇಕಿಲ್ಲ ಎಂದು ಸ್ಪಷ್ಟಪಡಿಸಿದರು.

ಮತದಾರರ ವಿಶೇಷ ಪರಿಷ್ಕರಣೆಗೆ ಸಂಬಂಧಿಸಿದ ಗಣತಿ ನಮೂನೆಗಳನ್ನು ಆಗಸ್ಟ್ 8ರಂದು ರಾತ್ರಿ 11.59 ಗಂಟೆಯೊಳಗೆ ಸಲ್ಲಿಸಬಹುದಾಗಿದೆ. ಬಳಿಕ ಆ್ಯಪ್ ಮುಚ್ಚಲಾಗುತ್ತದೆ ಎಂದು ತಿಳಿಸಿದರು. ಮತಗಟ್ಟೆ ಮಟ್ಟದ ಅಧಿಕಾರಿಗಳ ಮನೆ-ಮನೆ ಭೇಟಿ ಕಾರ್ಯ ಜೂನ್ 30ರಿಂದ ಆಗಸ್ಟ್ 8ರವರೆಗೆ ನಡೆಯಲಿದ್ದು, ಆಗಸ್ಟ್ 8ರಂದು ಮತಗಟ್ಟೆಗಳ ತಾರ್ಕಿಕ ಮರುಹೊಂದಾಣಿಕೆ, ಆಗಸ್ಟ್ 17ರಂದು ಕರಡು ಮತದಾರರ ಪಟ್ಟಿ ಪ್ರಕಟಣೆ, ಆಗಸ್ಟ್ 17ರಿಂದ ಸೆಪ್ಟೆಂಬರ್ 16ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಕೆ, ಆಗಸ್ಟ್ 17ರಿಂದ ಅಕ್ಟೋಬರ್ 15ರವರೆಗೆ ಆಕ್ಷೇಪಣೆಗಳ ವಿಲೇವಾರಿ ಹಾಗೂ ಅಕ್ಟೋಬರ್ 19ರಂದು ಅಂತಿಮ ಮತ ದಾರರ ಪಟ್ಟಿ ಪ್ರಕಟಿಸಲಾಗುವುದು ಎಂದು ವಿವರಿಸಿದರು.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ವಾತಂತ್ರ್ಯೋತ್ಸವದ ಪೂರ್ವಭಾವಿ ಸಿದ್ಧತಾ ಸಭೆ

ಸ್ವಾತಂತ್ರ್ಯ ದಿನಾಚರಣೆಗೆ ಅಗತ್ಯ ಸಿದ್ಧತೆಯಾಗಲಿ: ಡಾ.ಸುರೇಶ ಇಟ್ನಾಳ ಸೂಚನೆ

ಕೊಪ್ಪಳ,ಆ.04-

ಆಗಸ್ಟ್ 15 ರಂದು ನಡೆಯಲಿರುವ 80ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮವನ್ನು ಕೊಪ್ಪಳ ಜಿಲ್ಲೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಎಲ್ಲಾ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸೂಚನೆ ನೀಡಿದರು.



80ನೇ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಗಸ್ಟ್ 3ರಂದು ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಗಸ್ಟ್ 15ರಂದು ಬೆಳಗ್ಗೆ ಜಿಲ್ಲಾಡಳಿತ ಭವನದ ಆವರಣದಲ್ಲಿ ಹಾಗೂ ಅಂದು ಬೆಳಗ್ಗೆ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಧ್ವಜಾರೋಹಣ ಕಾರ್ಯಕ್ರಮ ನಡೆಯಲಿದ್ದು, ಎಲ್ಲ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಕಡ್ಡಾಯ ಪಾಲ್ಗೊಳ್ಳಬೇಕು. ಯಾವುದೇ ನಿಯಮಗಳು ಉಲ್ಲಂಘನೆಯಾಗದಂತೆ ಹಾಗೂ ಸರ್ಕಾರದ ಶಿಷ್ಟಾಚಾರ ಪಾಲನೆಯೊಂದಿಗೆ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ಆಯೋಜನೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಕೇಂದ್ರದ ಪ್ರಮುಖ ರಸ್ತೆಗಳು ಹಾಗೂ ವೃತ್ತಗಳನ್ನು ಸ್ವಚ್ಛಗೊಳಿಸಬೇಕು. ವಿವಿಧೆಡೆ ದೀಪಾಲಂಕಾರ ಮಾಡಬೇಕು. ಜಿಲ್ಲಾ ಕ್ರೀಡಾಂಗಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ವಿವಿಧ ತುಕಡಿಗಳಿಂದ ಪಥಸಂಚಲನವು ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಬೇಕು. ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ಸ್ವಾತಂತ್ರ್ಯ ಚಳುವಳಿಗಳನ್ನು ನೆನಪಿಸುವಂತಹ ರೀತಿಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ವಿಭಿನ್ನವಾಗಿ ನಡೆಯಬೇಕು. ಕ್ರೀಡಾಂಗಣದಲ್ಲಿ ಆರೋಗ್ಯ ಇಲಾಖೆಯಿಂದ ತುರ್ತು ಪರಿಸ್ಥಿತಿ ನಿರ್ವಹಣೆಗಾಗಿ ಅಗತ್ಯ ಸಿಬ್ಬಂದಿಯೊಂದಿಗೆ ಅಂಬ್ಯುಲೆನ್ಸ್, ಅಗ್ನಿಶಾಮಕ ಇಲಾಖೆಯಿಂದ ಅಗ್ನಿಶಾಮಕ ವಾಹನಗಳನ್ನು ಕಾಯ್ದಿರಿಸಬೇಕು. ಪಥಸಂಚಲನದಲ್ಲಿ ಪೌರಕಾರ್ಮಿಕರ ಒಂದು ತಂಡವು ಸಹ ಪಾಲ್ಗೊಳ್ಳುವಂತೆ ಕೊಪ್ಪಳ ನಗರಸಭೆಯ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಮಾತನಾಡಿ, ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮಕ್ಕಳಿಗೆ ಹಾಗೂ ಪಥಸಂಚಲನ ಪೂರ್ವಭಾವಿ ತರಬೇತಿಗೆ ಪಾಲ್ಗೊಳ್ಳುವ ವಿದ್ಯಾರ್ಥಿಗಳಿಗೆ ಕೆ.ಕೆ.ಎಸ್.ಆರ್.ಟಿ.ಸಿ ವತಿಯಿಂದ ಬಸ್ ಸೌಕರ್ಯ ಒದಗಿಸಬೇಕು. ಮಕ್ಕಳಿಗೆ ಹಾಲು ಅಥವಾ ಲಘು ಉಪಹಾರ ವಿತರಣೆಗೆ ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ರಾಮ್ ಎಲ್. ಅರಸಿದ್ದಿ ಅವರು ಮಾತನಾಡಿ, ಸ್ವಾತಂತ್ರ್ಯೋತ್ಸವ ದಿನಾಚರಣೆ ಅಂಗವಾಗಿ ನಡೆಯುವ ಪಥಸಂಚಲನವು ಶಿಸ್ತುಬದ್ಧ ಮತ್ತು ಅಚ್ಚುಕಟ್ಟಾಗಿರಬೇಕು. ಇದಕ್ಕಾಗಿ ನೀಡಲಾಗುವ ಪೂರ್ವಭಾವಿ ತರಬೇತಿಯಲ್ಲಿ ಆಯಾ ತಂಡದ ಮಕ್ಕಳು ಪಾಲ್ಗೊಳ್ಳಬೇಕು.

ಪ್ಲಾಸ್ಟಿಕ್ ಧ್ವಜ ವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದ್ದು, ಯಾವ ಅಂಗಡಿಗಳಲ್ಲೂ ಪ್ಲಾಸ್ಟಿಕ್ ಧ್ವಜ ಮಾರಾಟವಾಗದಂತೆ ನಗರಸಭೆ ಸೇರಿದಂತೆ ಸ್ಥಳೀಯ ಸಂಸ್ಥೆಗಳು ಕ್ರಮಕೈಗೊಳ್ಳಬೇಕು ಹಾಗೂ ಈ ಬಗ್ಗೆ ಸಾರ್ವಜನಿಕರಿಗೂ ಮಾಹಿತಿ ನೀಡಬೇಕು ಎಂದರು.

ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಮಾತನಾಡಿ, ಸ್ವಾತಂತ್ರ್ಯೋತ್ಸವದ ವ್ಯವಸ್ಥಿತ ಆಚರಣೆಗೆ ರಚಿಸಲ್ಪಟ್ಟ ಸಮಿತಿಗಳು ಪರಸ್ಪರ ಸಮನ್ವಯ ಸಾಧಿಸಿ ತಮ್ಮ ಜಾವಾಬ್ದಾರಿಗಳನ್ನು ನಿರ್ವಹಿಸಬೇಕು. ಸೌಲಭ್ಯ ವಿತರಣೆ, ಸಾಧಕರಿಗೆ ಸನ್ಮಾನ ಹಾಗೂ ಇತರ ಕಾರ್ಯಕ್ರಮಗಳು ಇದ್ದಲ್ಲಿ ಅಂತಹ ಅಧಿಕಾರಿಗಳು ಮುಂಚಿತವಾಗಿ ಜಿಲ್ಲಾಡಳಿತಕ್ಕೆ ಮತ್ತು ಸಂಬಂಧಪಟ್ಟ ಸಮಿತಿಗೆ ಮಾಹಿತಿ ನೀಡಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡೂರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಜಗದೀಶ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕರಾದ ಸೋಮಶೇಖರಗೌಡ ಪಾಟೀಲ್, ಆಹಾರ ಇಲಾಖೆ ಉಪನಿರ್ದೇಶಕರಾದ ವಿಶ್ವನಾಥಗೌಡ ಎಂ.ಎನ್., ಜಿಲ್ಲಾ ವಾರ್ತಾಧಿಕಾರಿ ಗವಿಸಿದ್ದಪ್ಪ ಹೊಸಮನಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ವಿಠ್ಠಲ ಜಾಬಗೌಡರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ತಹಸೀಲ್ದಾರರು, ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಜನಪ್ರತಿನಿಧಿಗಳ ನಿರ್ಲಕ್ಷ್ಯಕ್ಕೆ ರೈತನಿಂದ ತಕ್ಕ ಉತ್ತರ

ಸರಿಪಡಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದು ಜನಪ್ರತಿನಿಧಿಗಳಿಗೆ ನಾಚಿಕೆಗೇಡಿನ ಸಂಗತಿ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದರು.

ಸಿರವಾರಬೆಳಗಾವಿ ಮುಖ್ಯರಸ್ತೆಯನ್ನು ತಕ್ಷಣ ಶಾಶ್ವತವಾಗಿ ಅಭಿವೃದ್ಧಿಪಡಿಸಿ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕು. ರಸ್ತೆ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ವಹಿಸಿರುವ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಿ, ಸಾರ್ವಜನಿಕರ ಸಮಸ್ಯೆಗೆ ಶೀಘ್ರ ಪರಿಹಾರ ಒದಗಿಸಬೇಕು ಎಂದು ಸ್ಥಳೀಯರು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಕಾಲುವೆಗೆ ಕೂಡಲೇ ನೀರು ಹರಿಸಿ; ಬೆಳೆ ಉಳಿಸಿ: ರೈತರ ವೇದಿಕೆ ಸರ್ಕಾರಕ್ಕೆ ಆಗ್ರಹ

ಅನಗತ್ಯ ವಿಳಂಬವಾಗುತ್ತಿದ್ದು, ಇದರಿಂದ ರೈತರು ತೀವ್ರ ಆತಂಕಕ್ಕೆ ಒಳಗಾಗಿದ್ದಾರೆ ಎಂದು ಆರೋಪಿಸಿದರು.

ಈಗಾಗಲೇ ಹತ್ತಿ, ಭತ್ತ ಸೇರಿದಂತೆ ವಿವಿಧ ಮುಂಗಾರು ಬೆಳೆಗಳ ಬಿತ್ತನೆ ಪೂರ್ಣಗೊಂಡಿದ್ದು, ಬಹುತೇಕ ಬೆಳೆಗಳು 25ರಿಂದ 45 ದಿನಗಳ ಬೆಳವಣಿಗೆಯ ಹಂತದಲ್ಲಿವೆ. ಇದೇ ಸಮಯದಲ್ಲಿ ನೀರಿನ ಅವಶ್ಯಕತೆ ಹೆಚ್ಚಾಗಿದ್ದು, ಕಾಲುವೆ ನೀರು ದೊರೆಯದಿದ್ದರೆ ಬೆಳೆಗಳು ಒಣಗಿ ರೈತರಿಗೆ ಭಾರೀ ನಷ್ಟವಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಕಾಲುವೆಗೆ ನೀರು ಹರಿಸುವುದರಲ್ಲಿ ಇನ್ನಷ್ಟು ವಿಳಂಬವಾದರೆ ಕೃಷಿ ಉತ್ಪಾದನೆ ಕುಸಿತ, ಆಹಾರ ಧಾನ್ಯಗಳ ಕೊರತೆ, ಗ್ರಾಮೀಣ ಪ್ರದೇಶಗಳಲ್ಲಿ ರೈತರು ಹಾಗೂ ಕೃಷಿ ಕೂಲಿಕಾರರಿಗೆ ಉದ್ಯೋಗದ ಅಭಾವ, ಆರ್ಥಿಕ ಸಂಕಷ್ಟ ಸೇರಿದಂತೆ ಹಲವು ಗಂಭೀರ ಸಮಸ್ಯೆಗಳು ಎದುರಾಗುವ ಸಾಧ್ಯತೆ ಇದೆ ಎಂದು ಹೇಳಿದರು.

ಹೀಗಾಗಿ ಸರ್ಕಾರ ನಕಾರಾತ್ಮಕ ಮನೋಭಾವವನ್ನು ಬದಿಗೊತ್ತಿ, ಪ್ರಕೃತಿಯ ಮೇಲಿನ ವಿಶ್ವಾಸದೊಂದಿಗೆ ರೈತರ ಹಿತದೃಷ್ಟಿಯಿಂದ ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆಗೆ ಕೂಡಲೇ ನೀರು ಹರಿಸಲು ಮುಖ್ಯಮಂತ್ರಿ ಹಾಗೂ ಸಂಬಂಧಿಸಿದ ಅಧಿಕಾರಿಗಳು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ರಮೇಶ್ ನಾಡಗೌಡ, ನಾಗನಗೌಡ, ಶರಣಪ್ಪ ಗೌಡ, ಅಮರೇಶ್ ಹೊಸಮನಿ, ವೀರೇಂದ್ರ ಪಾಟೀಲ ಸೇರಿದಂತೆ ರೈತರ ವೇದಿಕೆಯ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

ಧ್ವಜಾರೋಹಣಕ್ಕೆ ಬೇರೆ ಜಿಲ್ಲೆಯ ಸಚಿವರು ಬಂದರೆ ಪ್ರತಿಭಟನೆ - ದಲಿತ ಪರ ಸಂಘಟನೆಗಳ ಎಚ್ಚರಿಕೆ

ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳು ರಾಜ್ಯದ ಅತ್ಯಂತ ಹಿಂದುಳಿದ ಜಿಲ್ಲೆಗಳಾಗಿದ್ದರೂ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ನೀಡದೆ ಸರ್ಕಾರ ಮತ್ತೊಮ್ಮೆ ಅನ್ಯಾಯ ಮಾಡಿದೆ. ಜಿಲ್ಲೆಯ ಅಭಿವೃದ್ಧಿ, ನೀರಾವರಿ, ಉದ್ಯೋಗ, ಕೈಗಾರಿಕೆ ಹಾಗೂ ಮೂಲಸೌಕರ್ಯಗಳ ಪ್ರಶ್ನೆಗಳಿಗೆ ಬಲವಾದ ಧ್ವನಿ ಎತ್ತುವ ಸ್ಥಳೀಯ ಸಚಿವರ ಕೊರತೆ ಜಿಲ್ಲೆಗೆ ದೊಡ್ಡ ಹಿನ್ನಡೆಯಾಗಿದೆ ಎಂದು ಆರೋಪಿಸಿದರು.

ಪಕ್ಕದ ಕಲಬುರಗಿ, ಕೊಪ್ಪಳ ಸೇರಿದಂತೆ ಹಲವು ಜಿಲ್ಲೆಗಳಿಗೆ ಒಂದಕ್ಕಿಂತ ಹೆಚ್ಚು ಸಚಿವ ಸ್ಥಾನ ದೊರೆತಿದ್ದರೂ, ರಾಯಚೂರು ಜಿಲ್ಲೆಗೆ ಮಾತ್ರ ಸಚಿವ ಸ್ಥಾನ ಸಿಗದಿರುವುದು ಜಿಲ್ಲೆಯ ಜನತೆಗೆ ಮಾಡಿದ ಅಪಮಾನವಾಗಿದೆ. ಜಿಲ್ಲೆಯ ಆಡಳಿತ ಪಕ್ಷ ಹಾಗೂ ಪ್ರತಿಪಕ್ಷದ ಜನಪ್ರತಿನಿಧಿಗಳು ಪಕ್ಷಭೇದ ಮರೆತು ಒಗ್ಗಟ್ಟಿನಿಂದ ಜಿಲ್ಲೆಯ ಹಿತಾಸಕ್ತಿಗಾಗಿ ಹೋರಾಡಬೇಕಿತ್ತು. ಆದರೆ ವೈಯಕ್ತಿಕ ರಾಜಕೀಯ ಹಿತಾಸಕ್ತಿಗಳಿಗೆ ಆದ್ಯತೆ ನೀಡಿರುವ ಪರಿಣಾಮವೇ ಈ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಟೀಕಿಸಿದರು.

ಜಿಲ್ಲೆಗೆ ಸಚಿವ ಸ್ಥಾನ ಹಾಗೂ ಉಸ್ತುವಾರಿ ಸಚಿವರ ಜವಾಬ್ದಾರಿಯನ್ನು ಸ್ಥಳೀಯ ಜನಪ್ರತಿನಿಧಿಗಳಿಗೆ ನೀಡುವವರೆಗೆ ಹೋರಾಟ ನಿರಂತರವಾಗಿ ಮುಂದುವರಿಯಲಿದೆ. ಆಗಸ್ಟ್ 15ರ ಪ್ರತಿಭಟನೆಗೆ ವಿವಿಧ ದಲಿತ, ಪ್ರಗತಿಪರ ಹಾಗೂ ಸಾಮಾಜಿಕ ಸಂಘಟನೆಗಳ ಕಾರ್ಯಕರ್ತರು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು...

ಪತ್ರಿಕಾಗೋಷ್ಠಿಯಲ್ಲಿ ದಲಿತ ಪರ ಸಂಘಟನೆಗಳ ಮುಖಂಡರಾದ ಹೇಮರಾಜ ಅಸ್ಕಿಹಾಳ, ಶ್ರೀನಿವಾಸ್, ಲಕ್ಷ್ಮಣ್, ತಾಯಪ್ಪ, ರವಿ, ನರಸಿಂಹಲು ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವಿಶ್ವ ಸ್ತನಪಾನ ಸಪ್ತಾಹ. ಮಗುವಿಗೆ ತಾಯಿ ಹಾಲೇ ಶ್ರೇಷ್ಠ-ಡಾ.ಮೃತ್ಯುಂಜಯ ಫ

ಹಾಲುಣಿಸುವುದರಿಂದ ಶಿಶುಮರಣವನ್ನು ತಪ್ಪಿಸಬಹುದು ಎಂದು ಹೇಳಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀದೇವಿ ಇವರು ಮಗುವಿಗೆ ಎದೆ ಹಾಲು ಸ್ವಚ್ಚ ಸುರಕ್ಷಿತ ಅಷ್ಟೇ ರುಚಿಕಟ್ಟಾಗಿರುತ್ತದೆ ಮಗು ಎದೆ ಹಾಲುಣಿಸುವುದು ಪ್ರತಿ ಅಮ್ಮನ ಜವಾಬ್ದಾರಿ ಎಂದು ಹೇಳಿದರು. ಚೌ ಮೀಯ ನರ್ಸಿಂಗ್ ಆಫೀಸರ್ ಇವರು ಪೌಷ್ಟಿಕ ಆಹಾರದ ಬಗ್ಗೆ, ವೈಯಕ್ತಿಕ ಸ್ವಚ್ಛತೆ, ಆಸ್ಪತ್ರೆ ಹೆರಿಗೆ ಹಾಗೂ ಲಸಿಕೆಗಳ ಕುರಿತು ಮಾಹಿತಿ ನೀಡಿದರು ಈ ಸಂದರ್ಭದಲ್ಲಿ ಡಾ. ಸುರೇಶ್ , ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀದೇವಿ ಹಾಗೂ ನರ್ಸಿಂಗ್ ಆಫೀಸರ್ ಚೌಮೀಯ, ಆಶಾ ಕಾರ್ಯಕರ್ತೆಯರಾದ ರೇಣುಕಾ, ಜರೀನಾ, ಶಹನಾಜ್, ಸೌಭಾಗ್ಯ ಭಾಗವಹಿಸಿದ್ದರು.

ರಾಯಚೂರಿಗೆ 'ಚೊಂಬು' ಕೊಟ್ಟ ಸರ್ಕಾರ - ರಾಘವೇಂದ್ರ ಕುಷ್ಟಗಿ

ಕುರಿತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಹಾಗೂ ಸೋನಿಯಾ ಗಾಂಧಿ ಅವರಿಗೆ ಮನವಿ ಸಲ್ಲಿಸಲಾಗುವುದು. ಸೆಪ್ಟೆಂಬರ್ 17ರಂದು ನಡೆಯಲಿರುವ ಹೋರಾಟದಲ್ಲೂ ಈ ಬೇಡಿಕೆಯನ್ನು ಪ್ರಮುಖವಾಗಿ ಮುಂದಿರಿಸಲಾಗುವುದು ಎಂದು ತಿಳಿಸಿದರು.

ಮಹಿಳಾ ಮುಖಂಡ ಶಾರದಾ ಮಾತನಾಡಿ, ಅತ್ಯಂತ ಹಿಂದುಳಿದ ಜಿಲ್ಲೆಯಾದ ರಾಯಚೂರಿಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ಸಿಗದಿರುವುದು ಬೇಸರದ ಸಂಗತಿ. ಮಹಿಳೆಯರಿಗೂ ಅವಕಾಶ ನೀಡದಿರುವುದು ಸರ್ಕಾರದ ನಿರ್ಲಕ್ಷ್ಯವನ್ನು ತೋರಿಸುತ್ತದೆ. ಕನಿಷ್ಠ ಇಬ್ಬರು ಮಹಿಳೆಯರಿಗೆ ಸಚಿವ ಸ್ಥಾನ ನೀಡಬೇಕಾಗಿತ್ತು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಆರ್. ಬಸನಗೌಡ, ಜಾನ್ ವೆಸ್ಲಿ, ಚಂದ್ರಶೇಖರ್ ಹಾಗೂ ಬುಡ್ಡನಗೌಡ ಉಪಸ್ಥಿತರಿದ್ದರು.

ದಾಖಲೆ ಕೊಡದ ಮನೆಗಳಿಗೆ ಗೃಹಜ್ಯೋತಿ ಯೋಜನೆಯ ಉಚಿತ ವಿದ್ಯುತ್ ಇಲ್ಲ

ಬಹುದಾಗಿದೆ. ಅಲ್ಲದೆ ಮೊದಲ ಬಾರಿ ಮನೆಗೆ ಭೇಟಿ ನೀಡಿದಾಗ ಫಲಾನುಭವಿಗಳು ಸಿಗದಿದ್ದರೆ ಅಥವಾ ಮಾಹಿತಿ ನೀಡದಿದ್ದರೆ, ಮೀಟರ್ ರೀಡರ್‌ಗಳು ಮತ್ತೊಮೆ ಮನೆಗಳಿಗೆ ಭೇಟಿ ನೀಡುವಂತೆ ನಿರ್ದೇಶನ ನೀಡಲಾಗಿದೆ.

ಸಮೀಕ್ಷೆಗೆ ಅಡ್ಡಿ: ಈ ನಡುವೆ ಬೆಸ್ಕಾಂ ವ್ಯಾಪ್ತಿಯ ವೈಟ್‌ಫೀಲ್ಡ್ , ಮಹದೇವಪುರ ಮತ್ತು ಸರ್ಜಾಪುರ ಸೇರಿದಂತೆ ಕೆಲವು ಪ್ರದೇಶಗಳ ದೊಡ್ಡ ಅಪಾರ್ಟ್‌ಮೆಂಟ್‌ಗಳಲ್ಲಿ ಮೀಟರ್ ರೀಡರ್‌ಗಳಿಗೆ ಪ್ರವೇಶ ನೀಡುತ್ತಿಲ್ಲ ಎಂಬ ದೂರುಗಳು ಕೇಳಿಬಂದಿವೆ. ಕೆಲ ನಿವಾಸಿಗಳು ತಮ ವೈಯಕ್ತಿಕ ಮಾಹಿತಿಯನ್ನು ಹಂಚಿಕೊಳ್ಳಲು ಹಿಂದೇಟು ಹಾಕುತ್ತಿರುವುದರಿಂದ ಸಮೀಕ್ಷೆ ಕಾರ್ಯಕ್ಕೆ ಅಡ್ಡಿಯಾಗುತ್ತಿದೆ ಎಂದು ಸಿಬ್ಬಂದಿ ತಿಳಿಸಿದ್ದಾರೆ. ಈ ಬಗ್ಗೆ ಮೀಟರ್ ರೀಡರ್‌ಗಳು ಬೆಸ್ಕಾಂ ಮುಖ್ಯ ಕಚೇರಿಯ ಗಮನಕ್ಕೂ ತಂದಿದ್ದಾರೆಂದು ತಿಳಿದುಬಂದಿದೆ.

ಕೆಲವರು ತಮ ಮಾಹಿತಿಯನ್ನು ಹಂಚಿಕೊಳ್ಳಲು ಆಸಕ್ತಿ ತೋರದಿರುವುದು ನಿಜ. ಅಂಥ ಸಂದರ್ಭಗಳಲ್ಲಿ ಆ್ಯಪ್‌ನಲ್ಲಿ ಮಾಹಿತಿ ನೀಡಲು ನಿರಾಕರಿಸಿದ್ದಾರೆ ಎಂಬ ಆಯ್ಕೆಯಿದೆ ಮತ್ತು ಫಲಾನುಭವಿಯಿಂದ ಸಹಿಯನ್ನೂ ಪಡೆಯಲಾಗುತ್ತದೆ. ಇದುವರೆಗೆ ಯಾವುದೇ ಫಲಾನುಭವಿಯನ್ನು ಪಟ್ಟಿಯಿಂದ ಕೈಬಿಡಲಾಗಿಲ್ಲ. ಯೋಜನೆಯಿಂದ ಯಾರನ್ನಾದರೂ ಹೊರಗಿಡುವ ಕುರಿತು ಅಂತಿಮ ನಿರ್ಧಾರವನ್ನು ಸರ್ಕಾರವೇ ಕೈಗೊಳ್ಳಲಿದೆ ಎಂದು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಶಿವಶಂಕರ ಎನ್ ಅವರು, ಸ್ಪಷ್ಟಪಡಿಸಿದ್ದಾರೆ.

ಸಮೀಕ್ಷೆ ವೇಳೆ ಯಾವ ದಾಖಲೆಗಳು ಬೇಕು? ಮನೆ-ಮನೆ ಸಮೀಕ್ಷೆ ವೇಳೆ ಫಲಾನುಭವಿಗಳು ಈ ಕೆಳಗಿನ ದಾಖಲೆಗಳನ್ನು ಸಿದ್ಧವಾಗಿಟ್ಟುಕೊಳ್ಳುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ. ಆಧಾರ್ ಕಾರ್ಡ್ ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರ, ಮತದಾರರ ಗುರುತಿನ ಚೀಟಿ ಪ್ಯಾನ್ ಕಾರ್ಡ್ ಬಾಡಿಗೆ ಅಥವಾ ಲೀಸ್ ಒಪ್ಪಂದ ಪತ್ರ(ಅಗತ್ಯವಿದ್ದರೆ) ಪಡಿತರ ಚೀಟಿ, ಜಾತಿ ಪ್ರಮಾಣಪತ್ರ (ಐಚ್ಛಿಕ), ಬಿಪಿಎಲ್ ಅಥವಾ ಎಪಿಎಲ್ ಕಾರ್ಡ್ ವಿವರಗಳು, ಇದರ ಜೊತೆಗೆ ಫಲಾನುಭವಿಯ ವೃತ್ತಿ, ವಾಸಿಸುವ ಸ್ಥಳ ಸೇರಿದಂತೆ ಕೆಲವು ಮೂಲಭೂತ ಮಾಹಿತಿಯನ್ನೂ ಮೀಟರ್ ರೀಡರ್‌ಗಳು ದಾಖಲಿಸುತ್ತಿದ್ದಾರೆ.

ಇಲ್ಲಿವರೆಗೆ ಬೆಸ್ಕಾಂ ವ್ಯಾಪ್ತಿಯಲ್ಲಿ 37,28,114, ಸಿಇಎಸ್‌ಸಿ (ಮೈಸೂರು) ವ್ಯಾಪ್ತಿಯಲ್ಲಿ 11,09,782, ಗೆಸ್ಕಾಂ (ಕಲಬುರಗಿ) ವ್ಯಾಪ್ತಿಯಲ್ಲಿ 8,50,786, ಹೆಸ್ಕಾಂ (ಹುಬ್ಬಳ್ಳಿ-ಧಾರವಾಡ) ವ್ಯಾಪ್ತಿಯಲ್ಲಿ 22,03,401, ಮೆಸ್ಕಾಂ (ಮಂಗಳೂರು) ವ್ಯಾಪ್ತಿಯಲ್ಲಿ 12,31,289 ಹಾಗೂ ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರ ಸಂಘದ ವ್ಯಾಪ್ತಿಯಲ್ಲಿ 26,709 ಫಲಾನುಭವಿಗಳ ಸಮೀಕ್ಷೆ ಪೂರ್ಣಗೊಂಡಿದೆ.

26,997 ಕೋಟಿಗೂ ಅಧಿಕ ವೆಚ್ಚ

ಆಗಸ್ಟ್ 2023ರಲ್ಲಿ ಆರಂಭವಾದ ಗೃಹಜ್ಯೋತಿ ಯೋಜನೆಗಾಗಿ ಮೇ 2026ರವರೆಗೆ ರಾಜ್ಯ ಸರ್ಕಾರ ಒಟ್ಟು ರೂ.26,997.54 ಕೋಟಿ ವೆಚ್ಚ ಮಾಡಿದೆ. ಇದರಲ್ಲಿ ಬೆಸ್ಕಾಂ ವ್ಯಾಪ್ತಿಯಲ್ಲೇ ಅತಿ ಹೆಚ್ಚು 12,577.61 ಕೋಟಿ ರೂ. ವೆಚ್ಚವಾಗಿದೆ. ಈ ನಡುವೆ ರಾಜ್ಯ ಸರ್ಕಾರದ ಅತ್ಯಂತ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ಗೃಹಜ್ಯೋತಿ ಯೋಜನೆಯ ಫಲಾನುಭವಿಗಳು ಸಮೀಕ್ಷೆಯಲ್ಲಿ ಕಡ್ಡಾಯವಾಗಿ ಸಹಕರಿಸಬೇಕು ಎಂದು ಇಂಧನ ಇಲಾಖೆ ಮನವಿ ಮಾಡಿದೆ.

ವಿಜಯನಗರ ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳಿಗೆ 2,944 ಕೋಟಿ ರೂ. ಬಿಡುಗಡೆ: ಪಿ.ಟಿ.ಪರಮೇಶ್ವರ್



ವಿಜಯನಗರ ,ಆ.04-

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಅನ್ನ ಭಾಗ್ಯ, ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ ಹಾಗೂ ಯುವನಿಧಿ ಯೋಜನೆಗಳಡಿ ಕಳೆದ ಮೂರು ವರ್ಷಗಳಲ್ಲಿ ವಿಜಯನಗರ ಜಿಲ್ಲೆಯ ಅರ್ಹ ಫಲಾನುಭವಿಗಳಿಗೆ ಒಟ್ಟು 2,944 ಕೋಟಿ ರೂ. ಅನುದಾನ ನೇರವಾಗಿ ಬಿಡುಗಡೆ ಮಾಡಲಾಗಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯ ಉಪಾಧ್ಯಕ್ಷ ಪಿ.ಟಿ. ಪರಮೇಶ್ವರ್ ತಿಳಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 2023ರಲ್ಲಿ ಸರ್ಕಾರ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಅಧಿಕಾರಕ್ಕೆ ಬಂದ ಕೆಲವೇ ದಿನಗಳಲ್ಲಿ ಜಾರಿಗೊಳಿಸಲಾಗಿದ್ದು, ರಾಜ್ಯದ ಕಟ್ಟಕಡೆಯ ವ್ಯಕ್ತಿಗೂ ಯೋಜನೆಗಳ ಲಾಭ ತಲುಪಿಸುವ ಉದ್ದೇಶದಿಂದ ಅನುಷ್ಠಾನಗೊಳಿಸಲಾಗಿದೆ. ಯೋಜನೆಗಳಲ್ಲಿರುವ ಕೆಲ ಲೋಪಗಳನ್ನು ಸರಿಪಡಿಸಿ ಇನ್ನಷ್ಟು ಪರಿಣಾಮಕಾರಿಯಾಗಿ ಅರ್ಹರಿಗೆ ತಲುಪಿಸಲು ಸರ್ಕಾರ ಪ್ರಾಮಾಣಿಕ ಪ್ರಯತ್ನ ನಡೆಸಲಿದೆ ಎಂದು ಹೇಳಿದರು.

ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯ ಸುಮಾರು 3.47 ಲಕ್ಷ ಕುಟುಂಬಗಳಿಗೆ 2023ರ ಆಗಸ್ಟ್‌ನಿಂದ 2024ರ ಡಿಸೆಂಬರ್‌ವರೆಗೆ ಡಿಬಿಟಿ ಮೂಲಕ 285 ಕೋಟಿ ರೂ. ಪಾವತಿಸಲಾಗಿದೆ. ನಂತರ ಪ್ರತಿ ಫಲಾನುಭವಿಗೆ 5 ಕೆಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ. ಗೃಹಜ್ಯೋತಿ ಯೋಜನೆಯಡಿ 3,21,966 ಫಲಾನುಭವಿಗಳಿಗೆ 2023ರ ಜೂನ್‌ನಿಂದ 2026ರ ಜೂನ್‌ವರೆಗೆ 468.26 ಕೋಟಿ ರೂ. ಸಹಾಯಧನ ನೀಡಲಾಗಿದೆ ಎಂದು ಮಾಹಿತಿ ನೀಡಿದರು. ಜಿಲ್ಲೆಯಲ್ಲಿ 2,03,766 ಸ್ಥಾವರಗಳ ಸಮೀಕ್ಷೆ ಗುರಿಯಿದ್ದು, ಇದುವರೆಗೆ 1,35,311 ಸ್ಥಾವರಗಳ ಸಮೀಕ್ಷೆ ನಡೆಸಿ ಶೇ.66.40ರಷ್ಟು ಪ್ರಗತಿ ಸಾಧಿಸಲಾಗಿದೆ. ಮರುಸಮೀಕ್ಷೆ ಮೂಲಕ ಅನರ್ಹ ಫಲಾನುಭವಿಗಳನ್ನು ಗುರುತಿಸಿ ಯೋಜನೆಗಳ ಲಾಭವನ್ನು ಅರ್ಹರಿಗೆ ತಲುಪಿಸಲಾಗುವುದು ಎಂದು ತಿಳಿಸಿದರು. ಗೃಹಲಕ್ಷ್ಮಿ ಯೋಜನೆಯಡಿ ಜಿಲ್ಲೆಯ 3,02,017 ನೋಂದಾಯಿತ ಫಲಾನುಭವಿಗಳಿಗೆ 2023ರ ಆಗಸ್ಟ್‌ನಿಂದ 2026ರ ಮೇವರೆಗೆ 1,727 ಕೋಟಿ ರೂ. ನೇರವಾಗಿ ಬ್ಯಾಂಕ್ ಖಾತೆಗೆ ಜಮೆ ಮಾಡ ಲಾಗಿದೆ. ಜೂನ್ ತಿಂಗಳ 31.38 ಕೋಟಿ ರೂ. ಅನುದಾನ ಬಿಡುಗಡೆ ಯಾಗಿದ್ದು, ಶೀಘ್ರದಲ್ಲೇ ಫಲಾನುಭವಿಗಳ ಖಾತೆಗೆ ಜಮೆಯಾಗಲಿದೆ ಎಂದರು.

ರಾಜ್ಯಾದ್ಯಂತ ಗೃಹಲಕ್ಷ್ಮಿ ಯೋಜನೆಯಲ್ಲಿ ಮೃತಪಟ್ಟ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಸುಮಾರು 117 ಕೋಟಿ ರೂ. ಪಾವತಿಯಾಗಿದ್ದು, ಇದರಲ್ಲಿ 20 ಕೋಟಿ ರೂ. ವನ್ನು ಈಗಾಗಲೇ ಸರ್ಕಾರದ ಖಜಾನೆಗೆ ಹಿಂದಿರುಗಿಸಲಾಗಿದೆ ಎಂದು ವಿವರಿಸಿದರು.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ 2026ರ ಜೂನ್‌ವರೆಗೆ 10.76 ಕೋಟಿ ಪ್ರಯಾಣಿಕರು ಉಚಿತ ಪ್ರಯಾಣದ ಸೌಲಭ್ಯ ಪಡೆದಿದ್ದು, ಇದಕ್ಕಾಗಿ 430 ಕೋಟಿ ರೂ. ವೆಚ್ಚ ಮಾಡಲಾಗಿದೆ.

ಭಾರತ್ ಜೋಡೋ ಯುವ ಸಂಘಗಳ ನೋಂದಣಿಗೆ ಕ್ರಮ ವಹಿಸಿ: ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ



ಕೊಪ್ಪಳ ,ಆ.04-

ಸಶಕ್ತ ಯುವಜನತೆಯನ್ನು ಒಗ್ಗೂಡಿಸಿ, ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಉತ್ತೇಜನ ನೀಡಿ, ಜಾಗೃತ ನಾಗರಿಕರಿಂದ ಕೂಡಿದ ವಿಕಾಸಶೀಲ, ಸೌಹಾರ್ದಯುತ ಮತ್ತು ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಶ್ರಮಿಸುವುದು 'ಭಾರತ್ ಜೋಡೋ ಯುವ ಸಂಘ'ದ ಮುಖ್ಯ ಉದ್ದೇಶವಾಗಿದೆ. ಸರ್ಕಾರದ ಆದೇಶದಂತೆ ಕೊಪ್ಪಳ ಜಿಲ್ಲೆಯಲ್ಲಿ 16 ರಿಂದ 35 ವಯೋಮಾನದವರನ್ನು ಭಾರತ್ ಜೋಡೋ ಯುವ ಸಂಘಕ್ಕೆ ನೋಂದಣಿ ಮಾಡಿಕೊಳ್ಳುವಂತೆ ಸಂಬಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಸುರೇಶ್ ಬಿ. ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಭಾರತ್ ಜೋಡೋ ಯುವ ಸಂಘದ ಸ್ಥಾಪನೆಗೆ ಸಂಬಧಿಸಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಯುವಕರಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸುವುದು ಈ ಕಾರ್ಯಕ್ರಮದ ಮೂಲ ಉದ್ದೇಶವಾಗಿದ್ದು, ಯುವ ಜನರಲ್ಲಿ ಕ್ರೀಡೆ, ಸಂಸ್ಕೃತಿ, ವೈಜ್ಞಾನಿಕ ಮನೋಭಾವ, ಸಾಮರಸ್ಯವನ್ನು ಉತ್ತೇಜಿಸಲು ಗ್ರಾಮ ಪಂಚಾಯತ್ ಮತ್ತು ನಗರ ವಾರ್ಡುಗಳ ವ್ಯಾಪ್ತಿಯಲ್ಲಿ ಅಂದಾಜು 10,000 ಭಾರತ್ ಜೋಡೋ ಯುವ ಸಂಘಗಳನ್ನು ಸ್ಥಾಪಿಸಬೇಕಿದೆ. ಯುವಜನರನ್ನು ಸಬಲೀಕರಣಗೊಳಿಸಿ ಸಮುದಾಯ ಅಭಿವೃದ್ಧಿ, ಸಾಮಾಜಿಕ ಸ್ವಾಸ್ಥ್ಯ ಮತ್ತು ತಳಮಟ್ಟದ ಆಡಳಿತದಲ್ಲಿ ಸಕ್ರಿಯ ಪಾಲುದಾರರನ್ನಾಗಿ ಮಾಡಬೇಕಾಗಿದೆ. ಭಾರತ್ ಜೋಡೋ ಸಂಘದಿದ ಮುಖ್ಯವಾಗಿ ಗ್ರಾಮೀಣ ನಗರದ ಯುವಜನತೆಯಲ್ಲಿ ಕ್ರೀಡೆ, ಫಿಟ್ನೆಸ್, ಆರೋಗ್ಯಕರ ಜೀವನ ಶೈಲಿ ಮತ್ತು ನಾಯಕತ್ವದ ಅವಕಾಶಗಳಲ್ಲಿನ ಅಡೆತಡೆಗಳನ್ನು ನಿವಾರಿಸಬಹುದಾಗಿದೆ. ಪ್ರತಿ ಗ್ರಾಮ ಪಂಚಾಯಿತಿ ಮತ್ತು ನಗರ, ವಾರ್ಡ್ ಒಂದರಲ್ಲಿ ಸಾಂಸ್ಥಿಕ ವೇದಿಕೆ ನಿರ್ಮಿಸಿ ನಾಯಕತ್ವ ಜವಾಬ್ದಾರಿ ಮತ್ತು ನಾಗರಿಕ ಪ್ರಜ್ಞೆಯನ್ನು ಬೆಳೆಸುವುದರ ಜೊತೆಗೆ ಒಂದುಗೂಡಿಸುವ ಉದ್ದೇಶ ಹೊಂದಿದೆ. ಆದ್ದರಿಂದ ಯುವ ಸಂಘಗಳನ್ನು ಸ್ಥಾಪಿಸಿ, ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ನೋಂದಣಿ ಆಗುವಂತೆ ಸಂಬಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಭಾರತ್ ಜೋಡೋ ಯುವ ಸಂಘ ಸ್ಥಾಪಿಸಲು ಜಿಲ್ಲೆಯ ಅಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕಿನ ತಹಶೀಲ್ದಾರರು, ತಾಲ್ಲೂಕು ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸೂಕ್ತ ಕ್ರಮ ವಹಿಸಿ ಸಂಘ ಸ್ಥಾಪಿಸಬೇಕು. ಯೋಜನೆಯ ಮಾರ್ಗಸೂಚಿಗಳ ಪ್ರಕಾರ, ಸಂಘದ ಸದಸ್ಯರು ತಾವು ನೋಂದಾಯಿಸಿಕೊಳ್ಳುವ ಗ್ರಾಮ ಪಂಚಾಯಿತಿ ಅಥವಾ ವಾರ್ಡ್ನ ಸಾಮಾನ್ಯ ನಿವಾಸಿ ಆಗಿರಬೇಕು. ಪ್ರತಿಯೊಬ್ಬ ಸದಸ್ಯರು ಒಂದು ಸಂಘಕ್ಕೆ ಮಾತ್ರ ಸದಸ್ಯರಾಗಲು ಅವಕಾಶವಿದ್ದು, ಸಂಘದ ಸದಸ್ಯರು ತಮ್ಮೊಳಗಿಂದಲೇ ಕಾರ್ಯಕಾರಿ ಸಮಿತಿಯನ್ನು ಆಯ್ಕೆ ಮಾಡಿಕೊಳ್ಳಬೇಕು. ಆಗಸ್ಟ್ 6ರಂದು ಮಾನ್ಯ ಉಪ ಮುಖ್ಯಮಂತ್ರಿಗಳು ಬಿಜೆವೈಎಸ್ ಮೊಬೈಲ್ ಆಪ್ ಹಾಗೂ ವೆಬ್‌ಸೈಟ್ ಅನ್ನು ಉದ್ಘಾಟಿಸಲಿದ್ದು, ಆಗಸ್ಟ್ ಎರಡನೇ ವಾರದಲ್ಲಿ ಮಾನ್ಯ ಮುಖ್ಯಮಂತ್ರಿಗಳು ರಾಜ್ಯಾದ್ಯಂತ ಭಾರತ್ ಜೋಡೋ ಯುವ ಸಂಘಗಳಿಗೆ ಅಧಿಕೃತ ಚಾಲನೆ ನೀಡಲಿದ್ದಾರೆ. ನಂತರ ನೋಂದಣಿ ಪೂರ್ಣಗೊಂಡ ಬಳಿಕ ಪ್ರತಿಯೊಬ್ಬ ಸದಸ್ಯರಿಗೂ ಯೂನಿಕ್ ಐಡಿ ಕಾರ್ಡ್ ನೀಡಲಾಗುತ್ತದೆ ಎಂದು ಅವರು ಹೇಳಿದರು.

ಪ್ರತಿ ಸಂಘಕ್ಕೆ ಸರ್ಕಾರದಿಂದ ಒಬ್ಬ ಮಾರ್ಗದರ್ಶಕರನ್ನು (ಮೆಂಟರ್) ನೇಮಕ ಮಾಡಲಾಗುತ್ತದೆ. ಅಲ್ಲದೆ, ನೋಂದಾಯಿತ ಸಂಘಗಳಿಗೆ ವಿವಿಧ ಹಂತಗಳಲ್ಲಿ ಒಟ್ಟು ರೂ.10 ಲಕ್ಷದವರೆಗೆ ಅನುದಾನ ನೀಡಲಾಗುವುದು. ಗ್ರಾಮ ಪಂಚಾಯತಿಗೆ ಒಂದು ಸಂಘ, ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ 4,000 ಸಾವಿರ ಜನಸಂಖ್ಯೆಗೆ ಒಂದು ಸಂಘ, ಪುರಸಭೆ ವ್ಯಾಪ್ತಿಯಲ್ಲಿ 6,000 ಜನಸಂಖ್ಯೆಗೆ ಒಂದು ಸಂಘ, ನಗರಸಭೆ ವ್ಯಾಪ್ತಿಯಲ್ಲಿ 8,000 ಜನಸಂಖ್ಯೆಗೆ ಒಂದು ಸಂಘದತೆ ಜಿಲ್ಲೆಯಲ್ಲಿ ಒಟ್ಟು 214 ಸಂಘಗಳು ಸ್ಥಾಪಿಸಬೇಕು. ಸಮಿತಿ ರಚನೆ ಮಾಡುವಲ್ಲಿ ಪ್ರತಿ ಸಮಿತಿಗೆ ಒಬ್ಬರು ಮಹಿಳೆಯರು ಕಡ್ಡಾಯವಾಗಿ ಇರಬೇಕು ಹಾಗೂ ಸಂಘದ ಕಾರ್ಯಕಾರಿ ಸಮಿತಿಯು ಆಯಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳನ್ನು ಸಮವಾಗಿ ಪ್ರತಿನಿಧಿಸುವುದು ಹಾಗೂ ಪ್ರತಿ ಭಾರತ್ ಜೋಡೋ ಯುವ ಸಂಘದ ಪಾದಾಧಿಕಾರಿಗಳಲ್ಲಿ ಮತ್ತು ಅದರ ಸದಸ್ಯರಲ್ಲಿ ಆಯಾ ವ್ಯಾಪ್ತಿಯಲ್ಲಿ ವಾಸವಿರುವ ಎಲ್ಲಾ ಜಾತಿಯವರನ್ನು ಕಡ್ಡಾಯವಾಗಿ ಒಳಗೊಂಡಿರಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಸಂಘದ ಕುರಿತು ವಿಷಯಗಳನ್ನು ಚರ್ಚಿಸಲು ಆಯಾ ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಸ್ಥಳಾವಕಾಶ ಇರುತ್ತದೆ. ನಗರ ಪ್ರದೇಶದಲ್ಲಿ ಸ್ಥಳೀಯ ಶಾಲೆ, ಕಾಲೇಜು, ಸಮುದಾಯ ಭವನ ಅಥವಾ ಯಾವುದಾದರೂ ಸರ್ಕಾರಿ ಕಟ್ಟಡದಲ್ಲಿ ಸೂಕ್ತ ವಿಸ್ತೀರ್ಣದ ಒಂದು ಕೊಠಡಿಯನ್ನು ಒದಗಿಸಲು ಅಧಿಕಾರಿಗಳಿಗೆ ತಿಳಿಸಿದರು.

ನೋಂದಾಯಿತ ಸಂಘವು ವಿಪತ್ತು ನಿರ್ವಹಣೆ ಮತ್ತು ಪರಿಹಾರ, ಜಲ ಸಂರಕ್ಷಣೆ ಚಟುವಟಿಕೆಗಳು, ತ್ಯಾಜ್ಯ ನಿರ್ವಹಣೆ ಉಪಕ್ರಮಗಳು, ಗ್ರಾಹಕ ಜಾಗೃತಿ ಅಭಿಯಾನಗಳು, ಸೈಬರ್ ಸುರಕ್ಷತೆ ಜಾಗೃತಿ, ಸಂಚಾರ ಜಾಗೃತಿ ಅಭಿಯಾನಗಳು, ಕೃಷಿ ಮತ್ತು ಗ್ರಾಮೀಣ ನಾವೀನ್ಯತೆ ಇತ್ಯಾದಿ ಸಮುದಾಯ ಫಲಾನುಭವಿ ಕಾರ್ಯಕ್ರಮಗಳು, ಧೂಮಪಾನ, ಮದ್ಯಪಾನ. ಡ್ರಗ್ಸ್ ವಿರುದ್ಧ ಚಟುವಟಿಕೆಗಳನ್ನು ಕೈಗೊಳ್ಳಬೇಕು. ಪ್ರತಿಯೊಂದು ಸಂಘವು ವಾರ್ಷಿಕ ಚಟುವಟಿಕೆಗಳ ಕ್ಯಾಲೆಂಡರ್ ತಯಾರಿಸಿ ಪ್ರತಿಯೊಂದು ಚಟುವಟಿಕೆಯ ವರದಿಯನ್ನು ಜಿಯೋ ಟ್ಯಾಗ್ ಮಾಡಿದ ಫೋಟೋಗಳೊಂದಿಗೆ ಬಿಜೆವೈಎಸ್ ಸಾಫ್ಟ್‌ವೇರ್‌ನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸಂಘದ ಕಾರ್ಯಚಟುವಟಿಕೆ ಬಗ್ಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಆಹಾರ ಮತ್ತು ನಾಗರಿಕರ ಸರಬರಾಜು ಇಲಾಖೆಯ ಉಪನಿರ್ದೇಶಕ ವಿಶ್ವನಾಥ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವಿಠ್ಠಲ ಜಾಬಗೌಡ್ರ, ಕೊಪ್ಪಳ ತಹಶೀಲ್ದಾರ ಬಸವರಾಜ ತೆನ್ನಳ್ಳಿ, ಡಿಡಿಪಿಐ ಸೋಮಶೇಖರ ಗೌಡ, ಡಿಡಿಪಿಯು ಜಗದೀಶ್ ಜಿ.ಎಚ್., ಮಹಿಳಾ ಮತ್ತು ಮಕ್ಕಳು ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಮರೇಶ್ ಹಾವಿನ, ಸೇರಿದಂತೆ ಎಲ್ಲಾ ತಾಲ್ಲೂಕಿನ ತಹಶೀಲ್ದಾರರು ಮತ್ತು ತಾಲ್ಲೂಕು ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

ಎಸ್‌ಐಆರ್ : ರಾಜ್ಯದಲ್ಲಿ ಸುಮಾರು 1 ಕೋಟಿಗೂ ಅಧಿಕ ಮಂದಿ ಡಿಲೀಟ್

ಸಮೀಕ್ಷೆ ಹಾಗೂ ಡಿಜಿಟಲೀಕರಣ ಕಾರ್ಯ ನಡೆಯುತ್ತಿದ್ದು, ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ನೀಡಿರುವ ಮಾಹಿತಿಯಂತೆ, ಎಣಿಕೆ ನಮೂನೆ ಹಾಗೂ ಸೇರಿ ಒಟ್ಟು 5,51,91,134 ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲಾಗಿದ್ದು, ಇದು ಶೇ.99.56ರಷ್ಟು ಪ್ರಗತಿಯನ್ನು ಸೂಚಿಸುತ್ತದೆ. ಎಣಿಕೆ ನಮೂನೆಗಳ ಪೈಕಿ 4,41,31,846 ನಮೂನೆಗಳು (ಶೇ.79.61) ಡಿಜಿಟಲೀಕರಣಗೊಂಡಿದ್ದು, ಇನ್ನೂ 2,41,180 ನಮೂನೆಗಳು (ಶೇ.0.44) ಬಾಕಿ ಉಳಿದಿವೆ.

ಇದೇ ವೇಳೆ 1,10,59,288 ಮತದಾರರನ್ನು (ಎಎಸ್‌ಡಿಡಿಒ) ವಿಭಾಗದಲ್ಲಿ ಗುರುತಿಸಲಾಗಿದ್ದು, ಇದು ಒಟ್ಟು ಮತದಾರರ ಶೇ.19.95ರಷ್ಟಾಗಿದೆ. ವಿಭಾಗದಲ್ಲಿ ಗುರುತಿಸಲಾದವರಲ್ಲಿ 16,18,630 ಮಂದಿ ಪತ್ತೆಯಾಗದ ಅಥವಾ ಗೈರುಹಾಜರಿರುವ ಮತದಾರರು (ಶೇ.2.92), 66,23,832 ಮಂದಿ ಶಾಶ್ವತವಾಗಿ ಸ್ಥಳಾಂತರಗೊಂಡವರು (ಶೇ.11.95), 16,21,446 ಮಂದಿ ಮೃತಪಟ್ಟವರು (ಶೇ.2.93), 6,78,213 ಮಂದಿ ಈಗಾಗಲೇ ಬೇರೆಡೆ ನೋಂದಾಯಿತರಾಗಿರುವವರು (ಶೇ.1.22) ಹಾಗೂ 5,17,167 ಮಂದಿ ಇತರ ಕಾರಣಗಳಿಂದ ಗುರುತಿಸಲ್ಪಟ್ಟಿದ್ದಾರೆ. ರಾಜ್ಯದ ಮತದಾರರು ಆನ್‌ಲೈನ್ ಮೂಲಕ 6,85,711 ಎಣಿಕೆ ನಮೂನೆಗಳನ್ನು ಸಲ್ಲಿಸಿದ್ದು, ಇದು ಒಟ್ಟು ಮತದಾರರ ಶೇ.1.24ರಷ್ಟಾಗಿದೆ ಎಂದು ತಿಳಿಸಲಾಗಿದೆ.

ಪಟ್ಟಿಯನ್ನು ಈಗಾಗಲೇ ಎಲ್ಲಾ ರಾಜಕೀಯ ಪಕ್ಷಗಳಿಗೆ ಹಾಗೂ ಸಂಬಂಧಿತ ಬಿಎಲ್‌ಒಗಳಿಗೆ ಪರಿಶೀಲನೆಗಾಗಿ ನೀಡಲಾಗಿದೆ. ಯಾವುದೇ ಮತದಾರರನ್ನು ತಪ್ಪಾಗಿ ಎಎಸ್‌ಡಿಡಿಒ ವಿಭಾಗದಲ್ಲಿ ಗುರುತಿಸಲಾಗಿದೆ ಎಂದು ಕಂಡುಬಂದಲ್ಲಿ, ಆಗಸ್ಟ್ 8ರವರೆಗೆ ಬಿಎಲ್‌ಒ ಅಥವಾ ಚುನಾವಣಾ ನೋಂದಣಿ ಅಧಿಕಾರಿ (ಇಆರ್‌ಒ) ಅವರನ್ನು ಸಂಪರ್ಕಿಸಿ ತಮ ಎಣಿಕೆ ನಮೂನೆಯನ್ನು ತಿದ್ದುಪಡಿ ಮಾಡಿಸಿಕೊಳ್ಳಬಹುದು ಎಂದು ಚುನಾವಣಾ ಆಯೋಗ ತಿಳಿಸಿದೆ.

ಇದರೊಂದಿಗೆ ಜಿಬಿಎ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಹೊಸ ಮತದಾರರ ನೋಂದಣಿಗಾಗಿ ಅಗತ್ಯವಿರುವ ಫಾರಂ-6ಗಳನ್ನು ಸಂಬಂಧಿತ ಚುನಾವಣಾ ನೋಂದಣಿ ಅಧಿಕಾರಿಗಳಿಗೆ ವಿತರಿಸಲಾಗಿದೆ.ಜೂನ್ 16ರಿಂದ ಆಗಸ್ಟ್ 2ರವರೆಗೆ ರಾಜ್ಯದಲ್ಲಿ ವಿವಿಧ ಅರ್ಜಿಗಳ ಮೂಲಕ ಒಟ್ಟು 11,98,517 ಅರ್ಜಿಗಳು ಸ್ವೀಕೃತವಾಗಿವೆ. ಇದರಲ್ಲಿ ಹೊಸ ಮತದಾರರ ನೋಂದಣಿಗೆ ಫಾರಂ-6 ಅಡಿಯಲ್ಲಿ 3,61,309 ಅರ್ಜಿಗಳು, ಎನ್‌ಆರ್‌ಐ ಮತದಾರರಿಗಾಗಿ ಫಾರಂ-6ಎ ಅಡಿಯಲ್ಲಿ 3,098 ಅರ್ಜಿಗಳು, ಹೆಸರು ಅಳಿಸುವ ಫಾರಂ-7 ಅಡಿಯಲ್ಲಿ 31,050 ಅರ್ಜಿಗಳು ಹಾಗೂ ತಿದ್ದುಪಡಿ ಮತ್ತು ವರ್ಗಾವಣೆಗೆ ಫಾರಂ-8 ಅಡಿಯಲ್ಲಿ 8,03,060 ಅರ್ಜಿಗಳು ಸಲ್ಲಿಕೆಯಾಗಿವೆ.

ಕೃತಿ ಬಿಡುಗಡೆ - ಶಾಲಾ ಗ್ರಂಥಾಲಯಗಳಿಗೆ ಪುಸ್ತಕ ಖರೀದಿಸುವ ಭರವಸೆ

ತಲುಪಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಹಿರಿಯ ಸಾಹಿತಿಗಳಾದ ಬಾಬು ಭಂಡಾರಿಗಲ್ ಹಾಗೂ ವೀರ ಹನುಮಾನ್ ಕೃತಿಯನ್ನು ಬಿಡುಗಡೆಗೊಳಿಸಿ ಮಾತನಾಡಿ, ಸ್ವಾತಂತ್ರ್ಯ ಹೋರಾಟಗಾರರ ಇತಿಹಾಸವನ್ನು ಯುವಪೀಳಿಗೆಗೆ ತಲುಪಿಸುವುದು ಪ್ರತಿಯೊಬ್ಬರ ಹೊಣೆಗಾರಿಕೆಯಾಗಿದೆ. ಇಂತಹ ಕೃತಿಗಳು ವಿದ್ಯಾರ್ಥಿಗಳಲ್ಲಿ ರಾಷ್ಟ್ರಭಕ್ತಿ, ಸಾಮಾಜಿಕ ಬದ್ಧತೆ ಹಾಗೂ ದೇಶಸೇವೆಯ ಮನೋಭಾವ ಬೆಳೆಸುವಲ್ಲಿ ಮಹತ್ವದ ಪಾತ್ರವಹಿಸುತ್ತವೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಹಿರಿಯ ಉಪಾಧ್ಯಕ್ಷ ಯಂಕಪ್ಪ ಪರಂಗಿ ಮಾತನಾಡಿ, ಸರ್ಕಾರಿ ನೌಕರರಲ್ಲಿರುವ ಸಾಹಿತ್ಯ, ಕಲೆ ಹಾಗೂ ಸೃಜನಶೀಲ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವ ಕಾರ್ಯವನ್ನು ಸಂಘ ನಿರಂತರವಾಗಿ ಕೈಗೊಳ್ಳುತ್ತಿದ್ದು, ಸಮಾಜಮುಖಿ ಚಟುವಟಿಕೆಗಳಿಗೆ ಸದಾ ಬೆಂಬಲ ನೀಡಲಿದೆ ಎಂದರು. ಪೌಢಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಮೊಯ್ನುಲ್ ಹಕ್ ಮಾತನಾಡಿ, ದೇಶಭಕ್ತಿ ಮತ್ತು ರಾಷ್ಟ್ರಪ್ರೇಮವನ್ನು ಬೆಳೆಸುವ ಇಂತಹ ಪುಸ್ತಕಗಳನ್ನು ಶಾಲಾ ಗ್ರಂಥಾಲಯಗಳಿಗೆ ಖರೀದಿಸುವ ಕುರಿತು ಶಿಕ್ಷಣ ಇಲಾಖೆಯ ಮೇಲಾಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು. ಲೇಖಕ ಪೃಥ್ವಿರಾಜ್ ಎನ್. ಸದಲ್ಲಿ ಮಾತನಾಡಿ, ಕೃತಿ ಪ್ರಕಟಣೆಗೆ ಬಾಲಯ್ಯ ಕಾದಿಗೇರ ಹಾಗೂ ಯಲ್ಲಪ್ಪ ಮರೆಮಜ್ಜೆ ಅವರ ಸಲಹೆ-ಮಾರ್ಗದರ್ಶನ ದೊರೆತಿದ್ದು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕವು ಸಂಪೂರ್ಣ ಸಹಕಾರ ನೀಡಿದೆ ಎಂದು ಕೃತಜ್ಞತೆ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಭೀಮೇಶ್ ನಾಯಕ್, ಪ್ರಸನ್ನ, ಮಾರುತಿ, ಮಲ್ಲೇಶ್ ನಾಯಕ್, ಆನಂದಕುಮಾರ್, ರೆಹಮಾನ್, ಸುರೇಶ್ ಸೇರಿದಂತೆ ಶಿಕ್ಷಕರು, ಸರ್ಕಾರಿ ನೌಕರರು, ಸಾಹಿತ್ಯಾಸಕ್ತರು ಹಾಗೂ ಗಣ್ಯರು ಉಪಸ್ಥಿತರಿದ್ದರು. ಶಿವರಾಜ್ ಅರಸ್ ಕಾರ್ಯಕ್ರಮ ನಿರೂಪಿಸಿ, ನರಸಪ್ಪ ವಡವಾಟಿ ವಂದಿಸಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಮಹಿಳೆಯರಿಲ್ಲದ ಸಚಿವ ಸಂಪುಟ: 33% ಮೀಸಲಾತಿ ಮಾತು ಎಲ್ಲೋಯ್ತು?

ಪ್ರಜಾಪ್ರಭುತ್ವದಲ್ಲಿ ಪ್ರತಿನಿಧಿತ್ವವು ಒಂದು ಸಾಂವಿಧಾನಿಕ ಮೌಲ್ಯ. ಪ್ರತಿನಿಧಿತ್ವವಿಲ್ಲದ ಅಧಿಕಾರವು ಅಪೂರ್ಣ. ಮಹಿಳೆಯರನ್ನು ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆಯಿಂದ ಹೊರಗಿಡುವ ಯಾವುದೇ ವ್ಯವಸ್ಥೆ, ಅದು ಯಾವ ಪಕ್ಷವೇ ಆಗಿರಲಿ, ಸಮಾನತೆಯ ಆದರ್ಶಕ್ಕೆ ವಿರುದ್ಧವಾಗಿಯೇ ಕಾಣಿಸುತ್ತದೆ.

ರಾಜಕೀಯದಲ್ಲಿ ಮಾತು ಮತ್ತು ಕೃತಿಯ ನಡುವಿನ ಸಾಮ್ಯತೆಯೇ ಒಂದು ಪಕ್ಷದ ನೈತಿಕತೆಯನ್ನು ಅಳೆಯುವ ಪ್ರಮುಖ ಮಾನದಂಡ. ಚುನಾವಣಾ ವೇದಿಕೆಗಳಲ್ಲಿ ಪಕ್ಷಗಳು ಯಾವ ವಿಚಾರವಾಗಿ ಮಾತನಾಡುತ್ತವೆಯೋ, ಅಧಿಕಾರಕ್ಕೆ ಬಂದಾಗ ಅವುಗಳನ್ನು ಜಾರಿಗೊಳಿಸುವುದರಲ್ಲಿ ಆಯಾ ಪಕ್ಷಗಳ ಬದ್ಧತೆ ಪ್ರದರ್ಶನವಾಗುತ್ತದೆ. ಅವುಗಳ ವಿಶ್ವಾಸಾರ್ಹತೆಯೂ ಪ್ರತಿಫಲಿಸುತ್ತದೆ. ಇದರಲ್ಲಿ ಮಹಿಳೆಯರ ವಿಚಾರಗಳೇನೂ ಹೊರತಲ್ಲ. ಅಥವಾ ಬಿಟ್ಟುಬಿಡಲು ಸಾಧ್ಯವೂ ಇಲ್ಲ.

ಸದ್ಯದ ದೇಶದ ಪರಿಸ್ಥಿತಿಯಲ್ಲಿ, ಮಹಿಳಾ ಮೀಸಲಾತಿಯ ಬಗ್ಗೆ ಅತ್ಯಂತ ಜೋರಾಗಿ ಮಾತನಾಡಿರುವ ಪಕ್ಷ ಕಾಂಗ್ರೆಸ್. ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ 33%ರಷ್ಟು ಮೀಸಲಾತಿ ಇರಬೇಕು, ಜಾರಿಯಾಗಲೇಬೇಕು ಎಂದು ಕಾಂಗ್ರೆಸ್ ನಿರಂತರವಾಗಿ ಒತ್ತಾಯಿಸುತ್ತಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ನಾಯಕಿ ಸೋನಿಯಾ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ಸೇರಿದಂತೆ ಹಲವಾರು ಕೈ ನಾಯಕರು ರಾಜಕೀಯದಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆ, ಮಹಿಳಾ ಪ್ರಾತಿನಿಧ್ಯದ ಬಗ್ಗೆ ಮಾತನಾಡುತ್ತಲೇ ಇದ್ದಾರೆ. ಮಹಿಳೆಯರು ಕೇವಲ ಮತದಾರರಲ್ಲ, ನಿರ್ಧಾರ ಕೈಗೊಳ್ಳುವ ಸ್ಥಾನಗಳಲ್ಲಿಯೂ ಇರಬೇಕು ಎಂದು ವಾದಿಸಿದ್ದಾರೆ.

ಆದರೆ, ಕಾಂಗ್ರೆಸ್ ನಾಯಕರ ಈ ವಾದಕ್ಕೆ ಅರ್ಥವಿದೆಯೇ? ಮಹಿಳಾ ಸಮಾನತೆಯನ್ನು ತನ್ನ ರಾಜಕೀಯ ಸಿದ್ಧಾಂತದ ಭಾಗವೆಂದು ಪ್ರತಿಪಾದಿಸುವ ಕಾಂಗ್ರೆಸ್ ನಾಯಕರು ಈ ಪ್ರಶ್ನೆಗೆ ಉತ್ತರಿಸುವರೇ?

ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷವೇ ಅಧಿಕಾರದಲ್ಲಿದೆ. ಇತ್ತೀಚೆಗೆ, ಡಿ.ಕೆ ಶಿವಕುಮಾರ್ ಅವರಿಗೆ ಸರ್ಕಾರದ ಚುಕ್ಕಾಣಿ ನೀಡುವ ಮೂಲಕ ನಾಯಕತ್ವವನ್ನೂ ಬದಲಾಯಿಸಿತು. ಹೊಸ ನಾಯಕತ್ವದೊಂದಿಗೆ, ಹೊಸ ಸಚಿವ ಸಂಪುಟವನ್ನೂ ರಚಿಸಿದೆ. ಆದರೆ, ಸಚಿವ ಸಂಪುಟದಲ್ಲಿ ಮಹಿಳೆಯರನ್ನು ಹೊರಗಿಟ್ಟಿದೆ. ರಾಜ್ಯದಲ್ಲಿ ಪ್ರಸ್ತುತ, 33 ಸಚಿವರ ಸಂಪುಟವಿದ್ದು, ಎಣಿಕೆಗೂ ಒಬ್ಬರೇ ಒಬ್ಬ ಮಹಿಳಾ ಸಚಿವರಿಲ್ಲ!

ಭಾರತೀಯ ರಾಜಕಾರಣದಲ್ಲಿ ಮಹಿಳೆಯರನ್ನು ಚುನಾವಣಾ ಪ್ರಚಾರದ ಮುಖಗಳಾಗಿ ಬಳಸುವುದು ಸಾಮಾನ್ಯ. ಮಹಿಳೆಯರ ಹೆಸರಿನಲ್ಲಿ ಯೋಜನೆಗಳನ್ನು ಘೋಷಿಸುವುದು, ಮಹಿಳಾ ಸಬಲೀಕರಣದ ಭಾಷಣ ಮಾಡುವುದು, ಮಹಿಳಾ ಮತದಾರರನ್ನು ಸೆಳೆಯುವ ಭರವಸೆಗಳನ್ನು ನೀಡುವುದು ಎಲ್ಲ ಪಕ್ಷಗಳಿಗೂ ಹೊಸದಲ್ಲ. ಆದರೆ, ಅಧಿಕಾರ ಹಂಚಿಕೆಯ ವಿಚಾರಗಳು ಬಂದಾಗ, ಮಹಿಳೆಯರನ್ನು ಮೂಲೆಗುಂಪು ಮಾಡಲಾಗುತ್ತದೆ. ಪುರುಷ ನಾಯಕತ್ವಕ್ಕೆ ಅಧಿಕಾರ ಹಂಚಿಕೆ ಸೀಮಿತವಾಗುತ್ತದೆ. ಇದು ಪುನರಾವರ್ತಿತ ಮಾದರಿ. ಇದನ್ನೇ ಕಾಂಗ್ರೆಸ್ ಮತ್ತೆ-ಮತ್ತೆ ಪಾಲಿಸುತ್ತಿದೆ. ಈಗಲೂ ಪುರುಷಾಧಿಕಾರಕ್ಕೇ ಅಂಟಿಕೊಂಡಿದೆ.

ಸಚಿವ ಸಂಪುಟವು ಕೇವಲ ಆಡಳಿತಾತ್ಮಕ ತಂಡವಲ್ಲ. ಅದು ಸರ್ಕಾರವನ್ನು ಮುನ್ನಡೆಸುವ ಪ್ರಮುಖ ಅಂಗ. ಯಾವ ಸಮುದಾಯಗಳಿಗೆ ಸ್ಥಾನ ನೀಡಲಾಗಿದೆ, ಯಾವ ವರ್ಗಗಳನ್ನು ಪ್ರತಿನಿಧಿಸಲಾಗಿದೆ, ಯಾರ ಧ್ವನಿಗೆ ಅಧಿಕಾರದ ಮೇಜಿನಲ್ಲಿ ಸ್ಥಾನ ಸಿಕ್ಕಿದೆ ಎಂಬುದನ್ನು ಅದು ಪ್ರತಿಬಿಂಬಿಸುತ್ತದೆ. ಹೀಗಾಗಿ ಮಹಿಳೆಯರ ಅನುಪಸ್ಥಿತಿಯು ಮಹಿಳೆಯರಿಗೆ ಅವಕಾಶವಿಲ್ಲ ಎಂದು ಮಾತ್ರವೇ ಹೇಳುವುದಿಲ್ಲ. ರಾಜ್ಯದ ಅರ್ಧದಷ್ಟಿರುವ ಮಹಿಳೆಯರನ್ನು ಕಡೆಗಣಿಸುತ್ತಿರುವ ಸರ್ಕಾರದ ಧೋರಣೆಯನ್ನೂ ಬಿಂಬಿಸುತ್ತದೆ.

ಮಹಿಳೆಯರು ದೇಶದ ಪ್ರತಿಯೊಂದು ಕ್ಷೇತ್ರದಲ್ಲೂ ಮುಂಚೂಣಿಗೆ ಬರುತ್ತಿದ್ದಾರೆ. ಗ್ರಾಮ ಪಂಚಾಯಿತಿಯಿಂದ ಹಿಡಿದು ಸ್ವಸಹಾಯ ಸಂಘಗಳು, ಕೃಷಿ, ಆರೋಗ್ಯ, ಶಿಕ್ಷಣ, ಉದ್ಯಮ, ವಿಜ್ಞಾನ, ನ್ಯಾಯಾಂಗ ಹಾಗೂ ಆಡಳಿತದವರೆಗೆ ಮಹಿಳೆಯರ ಪಾತ್ರ ನಿರ್ಣಾಯಕವಾಗಿದೆ. ಆದರೆ, ರಾಜ್ಯದ ಅತ್ಯುನ್ನತ ಕಾರ್ಯನಿರ್ವಾಹಕ ಅಧಿಕಾರ ಕೇಂದ್ರವಾದ ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಅವಕಾಶ ಸಿಗದಿದ್ದರೆ ಏನರ್ಥ. ಅರ್ಹ ಮಹಿಳೆಯರಿಲ್ಲ ಎಂಬುದು ಕಾಂಗ್ರೆಸ್‌ನ ವಾದವೇ? ಈ ವಾದವನ್ನು ಸಮಾಜ ಒಪ್ಪುತ್ತದೆಯೇ?

ರಾಜ್ಯ ಸಚಿವ ಸಂಪುಟ ರಚನೆಯಲ್ಲಿ ಕಾಂಗ್ರೆಸ್‌ನ ಹೈಕಮಾಂಡ್ ಪಾತ್ರ ಬಹುಮುಖ್ಯವಾದದ್ದು. ಹೀಗಿರುವಾಗ, ಸಚಿವರಾಗುವವರ ಅಂತಿಮ ಪಟ್ಟಿಯಲ್ಲಿದ್ದ ಗಾಯತ್ರಿ ಶಾಂತೇಗೌಡ ಅವರ ಹೆಸರನ್ನು ಕೈಬಿಡುವ ನಿರ್ಧಾರ ತೆಗೆದುಕೊಳ್ಳುವಾಗ ಮಹಿಳೆಯರ ಪ್ರತಿನಿಧಿತ್ವದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿಯಿಂದ ಹಿಡಿದು ಸುರ್ಜೇವಾಲಾ, ಸಿದ್ದರಾಮಯ್ಯ, ಡಿಕೆ ಶಿವಕುಮಾರ್‌ವರೆಗೆ ಯಾರೊಬ್ಬರಿಗೂ ಯಾವುದೇ ಪ್ರಶ್ನೆಗಳು ಎದುರಾಗಲಿಲ್ಲವೇ? ಸಚಿವ ಸಂಪುಟದ ಪಟ್ಟಿ ಅಂತಿಮಗೊಳ್ಳುವ ಮೊದಲು ಮಹಿಳಾ ಪಾಲುದಾರಿಕೆಯ ಕೊರತೆಯನ್ನು ಸರಿಪಡಿಸುವ ಪ್ರಯತ್ನವನ್ನೇ ಮಾಡಲಿಲ್ಲವೇ? ನಡೆದಿದ್ದರೆ ಅದರ ಫಲಿತಾಂಶ ಏನು? ನಡೆದಿರದಿದ್ದರೆ, ಮಹಿಳಾ ರಾಜಕೀಯ ಸಬಲೀಕರಣದ ಘೋಷಣೆಗಳ ಅರ್ಥವೇನು? ಈ ಪ್ರಶ್ನೆಗಳಿಗಾದರೂ ಕಾಂಗ್ರೆಸ್ ನಾಯಕತ್ವದಲ್ಲಿ ಉತ್ತರವಿದೆಯೇ?

ನಿಜಕ್ಕೂ ಕಾಂಗ್ರೆಸ್ ಮಹಿಳಾ ಸಬಲೀಕರಣ ಮತ್ತು ಮಹಿಳಾ ಪ್ರಾತಿನಿಧಿತ್ವಕ್ಕೆ ಮನ್ನಣೆ ಕೊಡುವುದೇ ಆದರೆ, ಪಟ್ಟಿಯಲ್ಲಿದ್ದ ಏಕೈಕ ಮಹಿಳೆ ಗಾಯತ್ರಿ ಅವರ ಹೆಸರನ್ನು ಕೈಬಿಡುವ ದರ್ದು ಏನಿತ್ತು? ಅಥವಾ ಅವರು ಈಗತಾನೇ ಶಾಸಕಿಯಾಗಿದ್ದಾರೆ ಎಂಬ ಕಾರಣ ಅಡ್ಡಿ ಬಂದರೆ, ಹಿರಿಯ ಶಾಸಕಿಯರು ಸಾಕಷ್ಟು ಸಂಖ್ಯೆಯಲ್ಲಿದ್ದರಲ್ಲ?

ಕಾಂಗ್ರೆಸ್ ಪ್ರಕಾರ, ಮಹಿಳಾ ಮೀಸಲಾತಿ ಅಥವಾ ಮಹಿಳಾ ಪಾಲುದಾರಿಕೆ ಎಂದರೆ, ಕೇವಲ ಸಂಸತ್ತು ಅಥವಾ ವಿಧಾನಸಭೆಯಲ್ಲಿ ಕೆಲವು ಸ್ಥಾನಗಳನ್ನು ಕೊಡುವುದಷ್ಟೇ ಎಂಬಂತಿದೆ. ಆದರೆ, ಮಹಿಳಾ ಪಾಲುದಾರಿಕೆಯ ನಿಜವಾದ ಅರ್ಥ ಅಧಿಕಾರದ ಪ್ರತಿಯೊಂದು ಹಂತದಲ್ಲೂ ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸುವುದು. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸಚಿವ ಸಂಪುಟ, ಪ್ರಮುಖ ಖಾತೆಗಳು, ಪಕ್ಷದ ನಿರ್ಧಾರ ಕೈಗೊಳ್ಳುವ ಸಮಿತಿಗಳು -ಇವೆಲ್ಲೆಡೆ ಮಹಿಳೆಯರ ಹಾಜರಾತಿ ಕಾಣಿಸದಿದ್ದರೆ, ಮೀಸಲಾತಿಯ ಚರ್ಚೆ ಅಪೂರ್ಣವಾಗಿಯೇ ಉಳಿಯುತ್ತದೆ.

ಪ್ರಜಾಪ್ರಭುತ್ವದಲ್ಲಿ ಪ್ರತಿನಿಧಿತ್ವವು ಒಂದು ಸಾಂವಿಧಾನಿಕ ಮೌಲ್ಯ. ಪ್ರತಿನಿಧಿತ್ವವಿಲ್ಲದ ಅಧಿಕಾರವು ಅಪೂರ್ಣ. ಮಹಿಳೆಯರನ್ನು ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆಯಿಂದ ಹೊರಗಿಡುವ ಯಾವುದೇ ವ್ಯವಸ್ಥೆ, ಅದು ಯಾವ ಪಕ್ಷವೇ ಆಗಿರಲಿ, ಸಮಾನತೆಯ ಆದರ್ಶಕ್ಕೆ ವಿರುದ್ಧವಾಗಿಯೇ ಕಾಣಿಸುತ್ತದೆ.

ಮಹಿಳಾ ಮೀಸಲಾತಿಯ ಪರವಾಗಿ ರಾಷ್ಟ್ರವ್ಯಾಪಿ ಅಭಿಯಾನ ನಡೆಸುವ ಪಕ್ಷಗಳಿಗಾದರೂ ಇದರ ಎಚ್ಚರಿಕೆ ಇರಬೇಕು. ಅಂತಹ ಪಕ್ಷಗಳು ತಮ್ಮದೇ ಸರ್ಕಾರಗಳಲ್ಲಿ ಕನಿಷ್ಠ ನೈತಿಕ ಮಾನದಂಡವನ್ನು ಪಾಲಿಸಬೇಕು. ಅಂತಹ ರಾಜಕೀಯ ಸಂಕಲ್ಪವಿದ್ದಾಗ ಮಾತ್ರವೇ, ಆಯಾ ಪಕ್ಷಗಳು ಮಹಿಳೆಯರ ವಿಚಾರವನ್ನು ಬಹಿರಂಗವಾಗಿ ಮಾತನಾಡುವ ನೈತಿಕತೆಯನ್ನು ಉಳಿಸಿಕೊಳ್ಳುತ್ತವೆ.

ಮಹಿಳೆಯರಿಗೆ 33% ಮೀಸಲಾತಿ ಕೊಡಲೇಬೇಕು ಎನ್ನುವ ಕಾಂಗ್ರೆಸ್ ಪಕ್ಷ ಈ ನೈತಿಕತೆಯನ್ನು ಉಳಿಸಿಕೊಳ್ಳಬೇಕಿತ್ತು. ಮಹಿಳೆಯರಿಗೆ ಸಚಿವ ಸಂಪುಟದಲ್ಲಿ ನ್ಯಾಯಯುತ ಪಾಲು ಮತ್ತು ಸ್ಥಾನಮಾನ ನೀಡಬೇಕಿತ್ತು. ಆದರೆ, ಅದಾಗಿಲ್ಲ. ಈ ವಿಚಾರದಲ್ಲಿ ಕಾಂಗ್ರೆಸ್ ಎರಡು ರೀತಿಯ ನಡೆ-ನುಡಿ ಹೊಂದಿರುವಂತೆಯೇ ಕಾಣುತ್ತದೆ!

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಕಾವೇರಿ ಜಲಾಶಯಗಳಿಗೆ ಹೆಚ್ಚಿದ ಒಳಹರಿವು: ಕರ್ನಾಟಕ-ತಮಿಳುನಾಡು ನೀರು ಹಂಚಿಕೆ ಬಿಕ್ಕಟ್ಟು ಸದ್ಯಕ್ಕೆ ಶಮನವೇ?

ಕಾವೇರಿ ಕಣಿವೆಯ ಪ್ರತಿಯೊಂದು ಹನಿ ನೀರನ್ನೂ ವೈಜ್ಞಾನಿಕವಾಗಿ ಲೆಕ್ಕಹಾಕಿ, ನ್ಯಾಯಯುತವಾಗಿ ಹಂಚಿ, ದಕ್ಷವಾಗಿ ಬಳಸಿದಾಗ ಮಾತ್ರ ಪ್ರತಿವರ್ಷ ಮಳೆಗಾಲದಲ್ಲಿ ಮರುಕಳಿಸುವ ಈ ಬಿಕ್ಕಟ್ಟಿಗೆ ದೀರ್ಘಕಾಲೀನ ಪರಿಹಾರ ದೊರೆಯಬಹುದು. ಸದ್ಯ ಜಲಾಶಯಗಳಿಗೆ ಹೆಚ್ಚಿದ ಒಳಹರಿವು ವಿವಾದಕ್ಕೆ ಅಂತ್ಯವಲ್ಲ; ಅದು ಎರಡೂ ರಾಜ್ಯಗಳಿಗೆ ಸಮಸ್ಯೆಯ ಮೂಲವನ್ನು ಅರಿತು ಸಮಗ್ರ ಪರಿಹಾರ ಕಂಡುಕೊಳ್ಳಲು ಪ್ರಕೃತಿ ನೀಡಿರುವ ಮತ್ತೊಂದು ಅವಕಾಶವಾಗಿದೆ

ಕಳೆದ ಕೆಲವು ವಾರಗಳಿಂದ ಕರ್ನಾಟಕ ಮತ್ತು ತಮಿಳುನಾಡು ನಡುವೆ ಮತ್ತೊಮ್ಮೆ ರಾಜಕೀಯ, ಕಾನೂನು ಮತ್ತು ಭಾವನಾತ್ಮಕ ಸಂಘರ್ಷಕ್ಕೆ ಕಾರಣವಾಗಿದ್ದ ಕಾವೇರಿ ನದಿ ನೀರು ಹಂಚಿಕೆಯ ಬಿಕ್ಕಟ್ಟಿಗೆ, ಕಾವೇರಿ ಜಲಾನಯನ ಪ್ರದೇಶದಲ್ಲಿ ಸುರಿದ ಮಳೆಯಿಂದಾಗಿ ಸದ್ಯಕ್ಕೆ ತಾತ್ಕಾಲಿಕ ವಿರಾಮ ಸಿಕ್ಕಂತಾಗಿದೆ. ಕೇರಳದ ವಯನಾಡು, ಕರ್ನಾಟಕದ ಕೊಡಗು ಹಾಗೂ ಕಬಿನಿ ಜಲಾನಯನ ಪ್ರದೇಶಗಳಲ್ಲಿ ಉತ್ತಮ ಮಳೆಯಾಗಿರುವುದರಿಂದ ಕಬಿನಿ ಸೇರಿದಂತೆ ಕಾವೇರಿ ಕಣಿವೆಯ ಪ್ರಮುಖ ಜಲಾಶಯಗಳಿಗೆ ಒಳಹರಿವು ಹೆಚ್ಚಾಗಿದೆ. ಕಳೆದ 10 ದಿನಗಳ ಹಿಂದೆ ಕೆಆರ್‌ಎಸ್ ಡ್ಯಾಂನಲ್ಲಿ 82 ಅಡಿ ಇದ್ದ ನೀರಿನ ಮಟ್ಟ ಇದೀಗ 100 ಅಡಿ ದಾಟಿದೆ.

ಕಬಿನಿ ಜಲಾಶಯದ ನೀರಿನ ಲಭ್ಯತೆ ಸುಧಾರಿಸಿದ ಬೆನ್ನಲ್ಲೇ ಕರ್ನಾಟಕವು ತಮಿಳುನಾಡಿನತ್ತ ಮತ್ತೆ ನೀರು ಹರಿಸಲು ಆರಂಭಿಸಿದೆ. ಹೀಗಾಗಿ ಕೆಲವೇ ದಿನಗಳ ಹಿಂದೆ ಪ್ರತಿಭಟನೆ, ಪರಸ್ಪರ ಆರೋಪ, ಸರ್ವಪಕ್ಷ ಸಭೆ, ನ್ಯಾಯಾಲಯದ ಮೊರೆ ಹೋಗುವ ಎಚ್ಚರಿಕೆ ಹಾಗೂ ಎರಡು ರಾಜ್ಯಗಳ ನಡುವಿನ ಸಂಬಂಧದಲ್ಲಿ ಉದ್ವಿಗ್ನತೆ ಸೃಷ್ಟಿಸಿದ್ದ ಕಾವೇರಿ ಸಮಸ್ಯೆ ಈಗ ಸ್ವಲ್ಪಮಟ್ಟಿಗೆ ತಣ್ಣಗಾಗುತ್ತಿದೆ. ಆದರೆ ಈ ಬೆಳವಣಿಗೆ ಕಾವೇರಿ ವಿವಾದದಕ್ಕೆ ತುಸು ನಿರಾಳತೆಯೇ ಹೊರತು ಅಂತ್ಯವಲ್ಲ.

ಕರ್ನಾಟಕ ಮತ್ತು ತಮಿಳುನಾಡಿನ ಪಾಲಿಗೆ ಕಾವೇರಿ, ಕೇವಲ ಒಂದು ನದಿಯಲ್ಲ. ಎರಡೂ ರಾಜ್ಯಗಳ ಲಕ್ಷಾಂತರ ರೈತರ ಕೃಷಿ ಬದುಕು, ಹಲವು ನಗರಗಳ ಕುಡಿಯುವ ನೀರು, ಜಲವಿದ್ಯುತ್ ಉತ್ಪಾದನೆ, ಕೈಗಾರಿಕಾ ಚಟುವಟಿಕೆಗಳು ಹಾಗೂ ಪ್ರಾದೇಶಿಕ ಆರ್ಥಿಕತೆಯ ಪ್ರಮುಖ ಭಾಗ ಕಾವೇರಿ ನೀರಿನ ಮೇಲೆ ಅವಲಂಬಿತವಾಗಿದೆ. ಕರ್ನಾಟಕದಲ್ಲಿ ಕೊಡಗು ಜಿಲ್ಲೆಯ ತಲಕಾವೇರಿಯಲ್ಲಿ ಹುಟ್ಟುವ ಕಾವೇರಿ, ರಾಜ್ಯದ ಹಲವು ಜಿಲ್ಲೆಗಳ ಮೂಲಕ ಹರಿದು ತಮಿಳುನಾಡು ಪ್ರವೇಶಿಸುತ್ತದೆ. ಕರ್ನಾಟಕದಲ್ಲಿ ಕೃಷ್ಣರಾಜ ಸಾಗರ, ಕಬಿನಿ, ಹೇಮಾವತಿ ಮತ್ತು ಹಾರಂಗಿ ಜಲಾಶಯಗಳು ಕಾವೇರಿ ಕಣಿವೆಯ ನೀರಿನ ಸಂಗ್ರಹ ಮತ್ತು ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ತಮಿಳುನಾಡಿನಲ್ಲಿ ಮೆಟ್ಟೂರು ಜಲಾಶಯವು ಕಾವೇರಿ ಜಲಾನಯನ ಪ್ರದೇಶದ ಕೃಷಿಗೆ ಜೀವನಾಡಿಯಾಗಿದೆ. ಹೀಗಾಗಿ ಮೇಲ್ದಂಡೆಯ ರಾಜ್ಯವಾದ ಕರ್ನಾಟಕ ತನ್ನ ಜಲಾಶಯಗಳಲ್ಲಿ ಎಷ್ಟು ನೀರು ಸಂಗ್ರಹಿಸಿಕೊಳ್ಳಬೇಕು ಮತ್ತು ಕೆಳದಂಡೆಯ ರಾಜ್ಯವಾದ ತಮಿಳುನಾಡಿಗೆ ಯಾವ ಅವಧಿಯಲ್ಲಿ ಎಷ್ಟು ನೀರು ಹರಿಸಬೇಕು ಎಂಬ ಪ್ರಶ್ನೆಯೇ ಹಲವು ದಶಕಗಳಿಂದ ವಿವಾದದಕ್ಕೆ ಕಾರಣವಾಗಿದೆ.

ಜುಲೈ ಅಂತ್ಯದ ವೇಳೆಗೆ ಜಲಾಶಯಗಳಲ್ಲಿದ್ದ ನೀರಿನ ಪರಿಸ್ಥಿತಿ ಈ ಆತಂಕಕ್ಕೆ ಕಾರಣವಾಗಿತ್ತು. ಜುಲೈ 27ರ ಅಧಿಕೃತ ಅಂಕಿಅಂಶಗಳ ಪ್ರಕಾರ ಕೃಷ್ಣರಾಜ ಸಾಗರ ಜಲಾಶಯದಲ್ಲಿ ಸುಮಾರು 17.13 ಟಿಎಂಸಿ, ಕಬಿನಿಯಲ್ಲಿ ಸುಮಾರು 13.28 ಟಿಎಂಸಿ, ಹೇಮಾವತಿಯಲ್ಲಿ ಸುಮಾರು 22.82 ಟಿಎಂಸಿ ಹಾಗೂ ಹಾರಂಗಿಯಲ್ಲಿ ಸುಮಾರು 7.58 ಟಿಎಂಸಿ ನೀರು ಸಂಗ್ರಹವಾಗಿತ್ತು. ಇದೇ ಅವಧಿಯಲ್ಲಿ ಹಿಂದಿನ ವರ್ಷದ ನೀರಿನ ಸಂಗ್ರಹಕ್ಕೆ ಹೋಲಿಸಿದಾಗ ಕೆಲವು ಜಲಾಶಯಗಳಲ್ಲಿ ಗಮನಾರ್ಹ ಕೊರತೆ ಕಂಡುಬಂದಿತ್ತು. ವಿಶೇಷವಾಗಿ ಕೆಆರ್‌ಎಸ್ ಮತ್ತು ಹೇಮಾವತಿ ಜಲಾಶಯಗಳ ಸಂಗ್ರಹ ಹಿಂದಿನ ವರ್ಷದ ಇದೇ ಅವಧಿಗಿಂತ ಕಡಿಮೆಯಾಗಿತ್ತು. ಈ ಅಂಕಿಅಂಶಗಳನ್ನು ಆಧರಿಸಿ ಕರ್ನಾಟಕವು ತನ್ನಲ್ಲಿಯೇ ನೀರಿನ ಕೊರತೆ ಇರುವುದರಿಂದ ತಮಿಳುನಾಡಿಗೆ ಹೆಚ್ಚುವರಿ ನೀರನ್ನು ಬಿಡುಗಡೆ ಮಾಡುವುದು ಕಷ್ಟ ಎಂಬ ನಿಲುವನ್ನು ಬಲಪಡಿಸಿತ್ತು.

ಆದರೆ ಕೆಲವೇ ದಿನಗಳ ಮಳೆಯೇ ಕಾವೇರಿ ಕಣಿವೆಯ ಪರಿಸ್ಥಿತಿಯನ್ನು ವೇಗವಾಗಿ ಬದಲಾಯಿಸಿತು. ಕೇರಳದ ವಯನಾಡು ಮತ್ತು ಕರ್ನಾಟಕದ ಕೊಡಗು ಭಾಗಗಳಲ್ಲಿ ಭಾರೀ ಮಳೆಯಾದ ಪರಿಣಾಮ ಕಬಿನಿ ಮತ್ತು ಇತರ ಜಲಾಶಯಗಳಿಗೆ ಒಳಹರಿವು ಗಣನೀಯವಾಗಿ ಏರಿತು. ಕಬಿನಿ ಜಲಾಶಯದ ನೀರಿನ ಮಟ್ಟ ಹೆಚ್ಚಾಗುತ್ತಿದ್ದಂತೆ ಹೆಚ್ಚುವರಿ ನೀರನ್ನು ಹೊರಬಿಡಬೇಕಾದ ಅನಿವಾರ್ಯತೆ ಉಂಟಾಯಿತು. ಈ ನೀರು ನದಿಯ ಮೂಲಕ ತಮಿಳುನಾಡಿನತ್ತ ಹರಿಯತೊಡಗಿತು. ಶನಿವಾರ-ಭಾನುವಾರ ರಾತ್ರಿ ಅವಧಿಯಲ್ಲಿ ಕಬಿನಿಯಿಂದ ತಮಿಳುನಾಡಿನತ್ತ ಸುಮಾರು ನಾಲ್ಕು ಟಿಎಂಸಿಯಷ್ಟು ನೀರು ಹರಿದಿದೆ. ಇದರೊಂದಿಗೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನಿರ್ದೇಶಿಸಿದ್ದ ಪ್ರಮಾಣದ ಬಹುಭಾಗವು ಪ್ರಕೃತಿಯ ಸಹಾಯದಿಂದಲೇ ತಮಿಳುನಾಡಿಗೆ ತಲುಪಿದಂತಾಯಿತು. ಪರಿಣಾಮವಾಗಿ ಕರ್ನಾಟಕ ತಕ್ಷಣವೇ ನೀರು ಬಿಡುಗಡೆ ಮಾಡಬೇಕಿದ್ದ ಒತ್ತಡ ಕಡಿಮೆಯಾಯಿತು.

ಕಾವೇರಿ ನೀರು ಹಂಚಿಕೆಯ ವಿಚಿತ್ರ ವಾಸ್ತವ ಇಲ್ಲೇ ಕಂಡುಬರುತ್ತದೆ. ಕೆಲವೇ ದಿನಗಳ ಹಿಂದೆ ನೀರಿಲ್ಲವೆಂದು ಪರಸ್ಪರ ಆರೋಪ ಮಾಡುತ್ತಿದ್ದ ಎರಡೂ ರಾಜ್ಯಗಳು, ಜಲಾನಯನ ಪ್ರದೇಶದಲ್ಲಿ ಮಳೆ ಹೆಚ್ಚಾದ ಕೂಡಲೇ ವಿವಾದದ ತೀವ್ರತೆ ಕಡಿಮೆಯಾಗಿರುವುದು ಗಮನಾರ್ಹ. ಅಂದರೆ ರಾಜಕೀಯ ಸಭೆಗಳಿಗಿಂತಲೂ ಚನ್ನಾಗಿ ಮಳೆ ಬಂದು ನೀರಿನ ಪ್ರಮಾಣ ಹೆಚ್ಚಾದರೆ ಮತ್ತು ಜಲಾಶಯಗಳಿಗೆ ಬರುವ ಒಳಹರಿವು ಹೆಚ್ಚಿದರೆ ಕಾವೇರಿ ವಿವಾದ ನಿಯಂತ್ರಣವಾಗುತ್ತದೆ ಎಂಬುದು ಮತ್ತೊಮ್ಮೆ ಸಾಬೀತಾಗಿದೆ.

ಅದೇ, ಮಳೆ ಕೊರತೆಯಾದಾಗ ಕಾನೂನು ಆದೇಶ, ಹಂಚಿಕೆ ಸೂತ್ರ ಮತ್ತು ರಾಜ್ಯಗಳ ಅಗತ್ಯಗಳ ನಡುವೆ ಸಂಘರ್ಷ ಉಂಟಾಗುತ್ತದೆ. ಮಳೆ ಹೆಚ್ಚಾದಾಗ ಜಲಾಶಯಗಳು ತುಂಬಿ ನೀರು ಸಹಜವಾಗಿ ಕೆಳದಂಡೆಗೆ ಹರಿಯುವುದರಿಂದ ಹಂಚಿಕೆಯ ಸಮಸ್ಯೆ ಕೆಲಕಾಲ ಹಿನ್ನೆಲೆಗೆ ಸರಿಯುತ್ತದೆ.

ಆದರೆ, ಈಗ ತಮಿಳುನಾಡಿಗೆ ನೀರು ಹರಿಯುತ್ತಿರುವುದರಿಂದ ವಿವಾದ ಸಂಪೂರ್ಣವಾಗಿ ಬಗೆಹರಿದಿದೆ ಎಂದು ಹೇಳಲಾಗದು. ಪ್ರಸ್ತುತ ಒಳಹರಿವು ಎಷ್ಟು ದಿನ ಮುಂದುವರಿಯುತ್ತದೆ ಎಂಬುದು ಮಳೆಯ ಮೇಲೆ ಅವಲಂಬಿತವಾಗಿದೆ. ಕೊಡಗು ಮತ್ತು ವಯನಾಡಿನಲ್ಲಿ ಮಳೆ ಮುಂದುವರೆದರೆ ಜಲಾಶಯಗಳ ಸಂಗ್ರಹ ಮತ್ತಷ್ಟು ಸುಧಾರಿಸಬಹುದು. ಮಳೆ ಏಕಾಏಕಿ ತಟಸ್ಥವಾದರೆ ಒಳಹರಿವು ಮತ್ತೆ ಕಡಿಮೆಯಾಗಬಹುದು. ಆಗ ಕರ್ನಾಟಕ ತನ್ನ ಕುಡಿಯುವ ನೀರು ಮತ್ತು ನೀರಾವರಿ ಅಗತ್ಯಗಳನ್ನು ಪರಿಗಣಿಸಿ ಹೊರಹರಿವು ಕಡಿಮೆ ಮಾಡಬಹುದು. ಮತ್ತೊಂದೆಡೆ, ತಮಿಳುನಾಡಿನ ಕುರುವೈ(ಅಲ್ಪಾವಧಿ ಭತ್ತದ ಬೆಳೆ ಮತ್ತು ನಂತರದ ಸಾಂಬಾ(ದೀರ್ಘ ಕಾಲದ ಭತ್ತದ ಬೆಳೆ) ಬೆಳೆಗಳಿಗೆ ನಿರಂತರವಾಗಿ ನೀರು ಬೇಕಾಗುತ್ತದೆ. ಕೆಲವು ದಿನ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿದ ಮಾತ್ರಕ್ಕೆ ಸಂಪೂರ್ಣ ಬೆಳೆ ಹಂಗಾಮಿನ ಅಗತ್ಯ ಪೂರೈಸುವುದಿಲ್ಲ. ಹೀಗಾಗಿ ಮುಂದಿನ ಕೆಲವು ವಾರಗಳು ಅಥವಾ ತಿಂಗಳುಗಳಲ್ಲಿ ಮಳೆಯ ಸೂಚನೆ ವಿವಾದದ ದಿಕ್ಕನ್ನು ನಿರ್ಧರಿಸಲಿದೆ.

ಕಾವೇರಿ ವಿವಾದದ ಕುರಿತು ಚರ್ಚಿಸುವಾಗ ನೀರಿನ ಪ್ರಮಾಣವನ್ನು ಕೇವಲ ಜಲಾಶಯದ ಮಟ್ಟ ಅಥವಾ ಕ್ಯುಸೆಕ್‌ಗಳ ಲೆಕ್ಕದಲ್ಲಿ ನೋಡಿದರಷ್ಟೇ ಸಾಲದು. ಕರ್ನಾಟಕದ ಮಂಡ್ಯ, ಮೈಸೂರು, ಕೊಡಗು ಮತ್ತು ಹಾಸನ ಜಿಲ್ಲೆಗಳ ರೈತರಿಗೆ ಕಾವೇರಿ ನೀರು ಕೃಷಿಗೆ ಪ್ರಮುಖ ಆಧಾರವಾಗಿದೆ. ಕಬ್ಬು, ಭತ್ತ ಮತ್ತು ಇತರ ನೀರಾವರಿ ಬೆಳೆಗಳನ್ನು ಬೆಳೆಯುವ ರೈತರು ಜಲಾಶಯಗಳಿಂದ ಕಾಲುವೆಗಳಿಗೆ ನೀರು ಹರಿಸುವಂತೆ ಹಾತೊರೆಯುತ್ತಾರೆ. ತಮಿಳುನಾಡಿನ ತಂಜಾವೂರು, ತಿರುವಾರೂರು, ನಾಗಪಟ್ಟಣಂ ಮತ್ತು ತಿರುಚಿರಾಪಳ್ಳಿ ಸೇರಿದಂತೆ ಜಲಾನಯನ ಜಿಲ್ಲೆಗಳ ಲಕ್ಷಾಂತರ ರೈತರ ಬದುಕು ಕೂಡ ಇದೇ ನದಿಯ ಮೇಲೆ ಅವಲಂಬಿತವಾಗಿದೆ. ಒಂದೇ ನದಿಯ ನೀರನ್ನು ಅವಲಂಬಿಸಿರುವ ಎರಡು ದೊಡ್ಡ ಕೃಷಿ ಪ್ರದೇಶಗಳ ನಡುವೆ ಮಳೆ ಕೊರತೆಯ ಸಮಯದಲ್ಲಿ ಬೇಡಿಕೆಗಳು ಮುಖಾಮುಖಿಯಾಗುವುದು ಸಹಜ. ಆದರೆ ಈ ಸಂಘರ್ಷವನ್ನು ರಾಜಕೀಯ ಭಾವೋದ್ರೇಕಕ್ಕೆ ಪರಿವರ್ತಿಸಿದಾಗ ರೈತರ ನಿಜವಾದ ಸಮಸ್ಯೆಗಳು ಹಿನ್ನೆಲೆಗೆ ಸರಿದು, ಭಾಷೆ ಮತ್ತು ರಾಜ್ಯಗಳ ನಡುವಿನ ವೈರತ್ವ ಮುನ್ನೆಲೆಗೆ ಬರುವ ಅಪಾಯವಿದೆ.

ಕಾವೇರಿ ವಿವಾದವು ಹಲವು ಬಾರಿ ಕೇವಲ ಸರ್ಕಾರಗಳು ಮತ್ತು ರೈತರ ನಡುವಿನ ಸಮಸ್ಯೆಯಾಗಿ ಉಳಿಯದೆ, ಎರಡು ರಾಜ್ಯಗಳ ಜನರ ನಡುವಿನ ಸಂಬಂಧಗಳ ಮೇಲೂ ಪರಿಣಾಮ ಬೀರುತ್ತದೆ. ಪ್ರತಿಭಟನೆಗಳು, ಬಂದ್‌ಗಳು, ವಾಹನ ಸಂಚಾರಕ್ಕೆ ಅಡ್ಡಿ, ಚಲನಚಿತ್ರ ಪ್ರದರ್ಶನಗಳ ಸ್ಥಗಿತ ಮತ್ತು ಭಾಷಾ ಆಧಾರಿತ ಆಕ್ರೋಶದಂತಹ ಘಟನೆಗಳು ಹಿಂದೆಯೂ ನಡೆದಿವೆ. ಪ್ರಸ್ತುತ ವಿವಾದದ ಸಂದರ್ಭದಲ್ಲಿಯೂ ತಮಿಳು ಚಲನಚಿತ್ರಗಳ ಪ್ರದರ್ಶನಕ್ಕೆ ಕೆಲವು ಭಾಗಗಳಲ್ಲಿ ವಿರೋಧ ವ್ಯಕ್ತವಾಗಿತ್ತು. ಇಂತಹ ಬೆಳವಣಿಗೆಗಳು ನೀರಿನ ಮೂಲ ಸಮಸ್ಯೆಯನ್ನು ಪರಿಹರಿಸುವುದಿಲ್ಲ. ಬದಲಾಗಿ, ಜೀವನೋಪಾಯಕ್ಕಾಗಿ ನೀರನ್ನು ನಿರೀಕ್ಷಿಸುತ್ತಿರುವ ಕರ್ನಾಟಕ ಮತ್ತು ತಮಿಳುನಾಡಿನ ಸಾಮಾನ್ಯ ರೈತರನ್ನು ಪರಸ್ಪರ ವಿರೋಧಿಗಳಂತೆ ಚಿತ್ರಿಸುತ್ತವೆ. ಕಾವೇರಿ ನೀರಿನ ಸಮಸ್ಯೆಯನ್ನು ಎರಡು ಭಾಷಾ ಸಮುದಾಯಗಳ ಸಂಘರ್ಷವನ್ನಾಗಿ ಪರಿವರ್ತಿಸದೆ, ವೈಜ್ಞಾನಿಕ ಜಲ ನಿರ್ವಹಣೆ ಮತ್ತು ನ್ಯಾಯಯುತ ಹಂಚಿಕೆಯ ಪ್ರಶ್ನೆಯಾಗಿ ನೋಡುವುದು ಎರಡೂ ರಾಜ್ಯಗಳ ಜವಾಬ್ದಾರಿಯಾಗಿದೆ.

ಕಾವೇರಿ ನೀರು ಹಂಚಿಕೆಯ ಸದ್ಯದ ಬಿಕ್ಕಟ್ಟಿನ ನಡುವೆಯೇ ಮೇಕೆದಾಟು ಸಮತೋಲನ ಜಲಾಶಯ ಯೋಜನೆ ಮತ್ತೆ ಚರ್ಚೆಯ ಕೇಂದ್ರಕ್ಕೆ ಬಂದಿದೆ. ಕರ್ನಾಟಕ ಸರ್ಕಾರದ ವಾದದ ಪ್ರಕಾರ, ಮಳೆ ಹೆಚ್ಚಾದ ಸಂದರ್ಭದಲ್ಲಿ ಕಾವೇರಿಯಲ್ಲಿ ಹರಿದು ತಮಿಳುನಾಡು ಮತ್ತು ನಂತರ ಸಮುದ್ರ ಸೇರುವ ಹೆಚ್ಚುವರಿ ನೀರನ್ನು ಮೇಕೆದಾಟಿನಲ್ಲಿ ಸಂಗ್ರಹಿಸಬಹುದು. ಈ ನೀರನ್ನು ಬೆಂಗಳೂರಿನ ಕುಡಿಯುವ ನೀರಿನ ಅಗತ್ಯಕ್ಕೆ ಬಳಸುವುದರ ಜತೆಗೆ, ಮಳೆ ಕೊರತೆಯ ಅವಧಿಯಲ್ಲಿ ತಮಿಳುನಾಡಿಗೆ ನಿಯಂತ್ರಿತವಾಗಿ ನೀರು ಬಿಡುಗಡೆ ಮಾಡಲು ಸಾಧ್ಯವಾಗುತ್ತದೆ ಎಂಬುದು ರಾಜ್ಯದ ವಾದ.

ಕಬಿನಿ ಜಲಾಶಯ ತುಂಬಿ ಕಡಿಮೆ ಅವಧಿಯಲ್ಲೇ ದೊಡ್ಡ ಪ್ರಮಾಣದ ನೀರು ತಮಿಳುನಾಡಿನತ್ತ ಹರಿದಿರುವುದನ್ನು ಉದಾಹರಣೆಯಾಗಿ ಮುಂದಿಟ್ಟುಕೊಂಡು, ಇಂತಹ ಹೆಚ್ಚುವರಿ ನೀರನ್ನು ಸಂಗ್ರಹಿಸಲು ಮೇಕೆದಾಟು ಯೋಜನೆ ಅಗತ್ಯ ಎಂದು ಕರ್ನಾಟಕ ಸರ್ಕಾರ ಹೇಳುತ್ತಿದೆ. ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಮೇಕೆದಾಟು ಯೋಜನೆಯೇ ಕಾವೇರಿ ನೀರು ಹಂಚಿಕೆ ಸಮಸ್ಯೆಗೆ ದೀರ್ಘಕಾಲೀನ ಪರಿಹಾರವಾಗಬಹುದು ಎಂದು ಪ್ರತಿಪಾದಿಸಿದ್ದಾರೆ. ಆದರೆ ತಮಿಳುನಾಡು, ಮೇಕೆದಾಟು ಯೋಜನೆಯನ್ನು ಅನುಮಾನದಿಂದ ನೋಡುತ್ತಿದೆ.

ಕರ್ನಾಟಕವು ಹೊಸ ಜಲಾಶಯ ನಿರ್ಮಿಸಿದರೆ ಕೆಳದಂಡೆಗೆ ಹರಿಯಬೇಕಾದ ನೀರನ್ನು ತನ್ನ ನಿಯಂತ್ರಣದಲ್ಲಿ ಇಟ್ಟುಕೊಳ್ಳಬಹುದು ಮತ್ತು ಸಂಕಷ್ಟದ ವರ್ಷಗಳಲ್ಲಿ ತಮಿಳುನಾಡಿಗೆ ನೀರು ಬಿಡದೆ ತಡೆಹಿಡಿಯಬಹುದು ಎಂಬುದು ಅಲ್ಲಿನ ಆತಂಕವಾಗಿದೆ. ಕೆಳದಂಡೆಯ ರಾಜ್ಯದ ಒಪ್ಪಿಗೆಯಿಲ್ಲದೆ ಮೇಲ್ದಂಡೆಯ ರಾಜ್ಯವು ಅಂತಾರಾಜ್ಯ ನದಿಗೆ ಅಡ್ಡಲಾಗಿ ದೊಡ್ಡ ಯೋಜನೆಯನ್ನು ಕೈಗೊಳ್ಳಬಾರದು ಎಂದು ತಮಿಳುನಾಡು ವಾದಿಸುತ್ತಿದೆ. ಕೇಂದ್ರ ಸರ್ಕಾರದ ನಿಲುವಿನ ವಿರುದ್ಧವೂ ತಮಿಳುನಾಡು ಆಕ್ಷೇಪ ವ್ಯಕ್ತಪಡಿಸಿದ್ದು, ಅಲ್ಲಿನ ಮುಖ್ಯಮಂತ್ರಿ ಪ್ರಧಾನಮಂತ್ರಿಗೆ ಪತ್ರ ಬರೆದು ಮಧ್ಯಪ್ರವೇಶಕ್ಕೆ ಆಗ್ರಹಿಸಿದ್ದಾರೆ. ಹೀಗಾಗಿ ಈಗಿನ ಮಳೆಯು ನೀರು ಹಂಚಿಕೆಯ ತಕ್ಷಣದ ಸಮಸ್ಯೆಯನ್ನು ಕಡಿಮೆ ಮಾಡಿದರೂ, ಮೆಕೆದಾಟು ಯೋಜನೆ ವಿಚಾರದಲ್ಲಿ ಹೊಸ ಕಾನೂನು ಮತ್ತು ರಾಜಕೀಯ ಸಂಘರ್ಷ ಮುಂದುವರಿಯುವ ಸಾಧ್ಯತೆ ಇದೆ.

ಈ ಸಮಸ್ಯೆಗೆ ಕೇವಲ ಮತ್ತೊಂದು ಜಲಾಶಯ ನಿರ್ಮಿಸುವುದರಿಂದ ಅಥವಾ ನ್ಯಾಯಾಲಯದ ಆದೇಶದಿಂದಲೇ ಸಂಪೂರ್ಣ ಪರಿಹಾರ ಸಿಗುತ್ತದೆಂದು ಹೇಳಲಾಗದು. ಕಾವೇರಿ ಕಣಿವೆಯ ನೀರಿನ ಬೇಡಿಕೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ. ಬೆಂಗಳೂರಿನ ಜನಸಂಖ್ಯೆ ಮತ್ತು ಕುಡಿಯುವ ನೀರಿನ ಬೇಡಿಕೆ ವೇಗವಾಗಿ ಏರುತ್ತಿದೆ. ಮೈಸೂರು ಸೇರಿದಂತೆ ಇತರ ನಗರಗಳೂ ಕಾವೇರಿ ನೀರನ್ನು ಹೆಚ್ಚು ಅವಲಂಬಿಸುತ್ತಿವೆ. ಎರಡೂ ರಾಜ್ಯಗಳಲ್ಲಿ ನೀರಾವರಿ ಪ್ರದೇಶಗಳು ವಿಸ್ತರಿಸಿರುವುದರಿಂದ ಕೃಷಿಗೆ ಬೇಕಾದ ನೀರಿನ ಪ್ರಮಾಣವೂ ಹೆಚ್ಚಾಗಿದೆ. ಕಬ್ಬು ಮತ್ತು ಭತ್ತದಂತಹ ಹೆಚ್ಚು ನೀರು ಬೇಡುವ ಬೆಳೆಗಳನ್ನು ದೊಡ್ಡ ಪ್ರಮಾಣದಲ್ಲಿ ಬೆಳೆಯಲಾಗುತ್ತಿದೆ. ಇದೇ ವೇಳೆ ಮಳೆ ಮಾದರಿಗಳಲ್ಲಿ ಅನಿಶ್ಚಿತತೆ ಹೆಚ್ಚುತ್ತಿದೆ. ದೀರ್ಘಕಾಲ ಮಳೆಯಿಲ್ಲದೆ ಇದ್ದು, ನಂತರ ಕೆಲವೇ ದಿನಗಳಲ್ಲಿ ಭಾರೀ ಮಳೆಯಾಗುವ ಪರಿಸ್ಥಿತಿ ಜಲಾಶಯಗಳ ನಿರ್ವಹಣೆಯನ್ನು ಇನ್ನಷ್ಟು ಸಂಕೀರ್ಣಗೊಳಿಸುತ್ತಿದೆ.

ಹವಾಮಾನ ಬದಲಾವಣೆಯ ಪರಿಣಾಮವಾಗಿ ಮಳೆಯ ಪ್ರಮಾಣ ಮಾತ್ರವಲ್ಲದೆ, ಮಳೆ ಸುರಿಯುವ ಕಾಲ, ಪ್ರದೇಶ ಮತ್ತು ತೀವ್ರತೆಯಲ್ಲೂ ಬದಲಾವಣೆ ಸಂಭವಿಸುತ್ತಿದೆ. ಹಿಂದೆ ಹಲವು ವಾರಗಳ ಕಾಲ ಸಮಾನವಾಗಿ ಸುರಿಯುತ್ತಿದ್ದ ಮಳೆ ಈಗ ಕೆಲವೇ ದಿನಗಳಲ್ಲಿ ಅತಿಯಾದ ಪ್ರಮಾಣದಲ್ಲಿ ಸುರಿದು ಪ್ರವಾಹಕ್ಕೆ ಕಾರಣವಾಗಬಹುದು. ನಂತರ ದೀರ್ಘಕಾಲ ಮಳೆ ವಿರಾಮ ಉಂಟಾಗಬಹುದು. ಇಂತಹ ಸ್ಥಿತಿಯಲ್ಲಿ ಜಲಾಶಯಗಳು ಏಕಾಏಕಿ ತುಂಬಿ ಹೆಚ್ಚಿನ ನೀರನ್ನು ಹೊರಬಿಡಬೇಕಾಗುತ್ತದೆ. ಆದರೆ ಕೆಲವೇ ವಾರಗಳ ನಂತರ ಮತ್ತೆ ನೀರಿನ ಕೊರತೆ ಎದುರಾಗಬಹುದು. ಹೀಗಾಗಿ ಕಾವೇರಿ ನೀರಿನ ನಿರ್ವಹಣೆಯನ್ನು ಹಿಂದಿನ ಸರಾಸರಿ ಮಳೆ ಪ್ರಮಾಣದ ಆಧಾರದಲ್ಲಿ ಮಾತ್ರ ಯೋಜಿಸುವುದು ಮುಂದಿನ ದಿನಗಳಲ್ಲಿ ಕಷ್ಟವಾಗಲಿದೆ. ನೈಜ ಸಮಯದ ಮಳೆ ಮಾಹಿತಿ, ಜಲಾಶಯದ ಒಳಹರಿವು, ಬೆಳೆ ಪ್ರದೇಶ, ಮಣ್ಣಿನ ತೇವಾಂಶ ಮತ್ತು ಕುಡಿಯುವ ನೀರಿನ ಬೇಡಿಕೆಯನ್ನು ಆಧರಿಸಿದ ಸಮಗ್ರ ವ್ಯವಸ್ಥೆ ರೂಪಿಸಬೇಕಾಗಿದೆ.

ಎರಡೂ ರಾಜ್ಯಗಳು ನೀರನ್ನು ಪಡೆಯುವ ಹಕ್ಕಿನ ಬಗ್ಗೆ ಮಾತ್ರ ಮಾತನಾಡದೆ, ಲಭ್ಯವಿರುವ ನೀರನ್ನು ಎಷ್ಟು ದಕ್ಷವಾಗಿ ಬಳಸುತ್ತಿವೆ ಎಂಬುದನ್ನೂ ಪರಿಶೀಲಿಸಬೇಕಾಗಿದೆ. ಕೃಷಿಯಲ್ಲಿ ಹಳೆಯ ಮಾದರಿಯ ಪ್ರವಾಹ ನೀರಾವರಿ ಪದ್ಧತಿಯ ಬದಲು ಹನಿ ನೀರಾವರಿ, ತುಂತುರು ನೀರಾವರಿ ಮತ್ತು ನೀರು ಉಳಿಸುವ ಬೆಳೆ ಪದ್ಧತಿಗಳಿಗೆ ಉತ್ತೇಜನ ನೀಡಬೇಕು. ಹೆಚ್ಚು ನೀರು ಅಗತ್ಯವಿರುವ ಬೆಳೆಗಳನ್ನು ನೀರಿನ ಕೊರತೆಯ ಪ್ರದೇಶಗಳಲ್ಲಿ ನಿರ್ಬಂಧಿಸುವ ಅಥವಾ ಪರ್ಯಾಯ ಬೆಳೆಗಳಿಗೆ ಪ್ರೋತ್ಸಾಹಿಸುವ ನೀತಿ ಅಗತ್ಯವಾಗಿದೆ. ಕಾಲುವೆಗಳಲ್ಲಿ ಸೋರಿಕೆ ತಡೆಯುವುದು, ಕೆರೆಗಳನ್ನು ಪುನರುಜ್ಜೀವನಗೊಳಿಸುವುದು, ಮಳೆ ನೀರು ಸಂಗ್ರಹಿಸುವುದು ಮತ್ತು ಸಂಸ್ಕರಿಸಿದ ತ್ಯಾಜ್ಯ ನೀರನ್ನು ಕೈಗಾರಿಕೆ ಹಾಗೂ ಕೃಷಿಗೆ ಮರುಬಳಕೆ ಮಾಡುವುದರಿಂದ ಕಾವೇರಿಯ ಮೇಲಿನ ಒತ್ತಡವನ್ನು ಕಡಿಮೆ ಮಾಡಬಹುದು. ಬೆಂಗಳೂರಿನಂತಹ ನಗರಗಳಲ್ಲಿ ಕುಡಿಯುವ ನೀರಿನ ಬಳಕೆಗೆ ಕಠಿಣ ನಿಯಂತ್ರಣ, ಮಳೆ ನೀರು ಸಂಗ್ರಹ ಮತ್ತು ಕೆರೆಗಳ ಸಂರಕ್ಷಣೆ ಜಾರಿಯಾಗದೆ ಕಾವೇರಿಯಿಂದ ಮತ್ತಷ್ಟು ನೀರು ತರಲು ಮುಂದಾಗುವುದು ದೀರ್ಘಕಾಲೀನ ಪರಿಹಾರವಾಗುವುದಿಲ್ಲ.

ನೀರಿನ ಹಂಚಿಕೆ ಕುರಿತು ಜನರಿಗೆ ಪಾರದರ್ಶಕ ಮಾಹಿತಿ ನೀಡುವುದೂ ಅತ್ಯಂತ ಅಗತ್ಯವಾಗಿದೆ. ಜಲಾಶಯಗಳಲ್ಲಿ ಎಷ್ಟು ನೀರಿದೆ, ಎಷ್ಟು ಒಳಹರಿವು ಬರುತ್ತಿದೆ, ಎಷ್ಟು ನೀರನ್ನು ಕುಡಿಯಲು ಕಾಯ್ದಿರಿಸಲಾಗಿದೆ, ನೀರಾವರಿಗೆ ಎಷ್ಟು ಅಗತ್ಯವಿದೆ ಮತ್ತು ತಮಿಳುನಾಡಿಗೆ ಎಷ್ಟು ಹರಿಸಲಾಗಿದೆ ಎಂಬ ಮಾಹಿತಿಯನ್ನು ನಿತ್ಯವೂ ಸಾರ್ವಜನಿಕವಾಗಿ ಪ್ರಕಟಿಸಬೇಕು. ಇಲ್ಲದಿದ್ದಲ್ಲಿ ಮಾಹಿತಿ ಕೊರತೆಯಿಂದ ವದಂತಿಗಳು ಮತ್ತು ರಾಜಕೀಯ ಆರೋಪಗಳಿಗೆ ಕಾರಣವಾಗುತ್ತದೆ. ಒಂದು ರಾಜ್ಯ ಮತ್ತೊಂದು ರಾಜ್ಯಕ್ಕೆ ಅತಿಯಾಗಿ ನೀರು ಬಿಡುತ್ತಿದೆ ಅಥವಾ ಸಂಪೂರ್ಣವಾಗಿ ನೀರು ತಡೆಹಿಡಿದಿದೆ ಎಂಬ ವೈಭವೀಕೃತ ಹೇಳಿಕೆಗಳು ಜನರಲ್ಲಿ ಆಕ್ರೋಶ ಹೆಚ್ಚಿಸುತ್ತವೆ. ವಿಶ್ವಾಸಾರ್ಹ ಮತ್ತು ನೈಜ ಸಮಯದ ಅಂಕಿಅಂಶಗಳು ಲಭ್ಯವಿದ್ದರೆ ಸಾರ್ವಜನಿಕ ಚರ್ಚೆಯನ್ನು ಹೆಚ್ಚು ವಾಸ್ತವಿಕ ನೆಲೆಯಲ್ಲಿ ನಡೆಸಬಹುದು.

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ನಿಯಂತ್ರಣ ಸಮಿತಿ ಕೇವಲ ಆದೇಶ ಹೊರಡಿಸುವ ಸಂಸ್ಥೆಗಳಾಗಿರದೆ, ಎರಡೂ ರಾಜ್ಯಗಳ ನಡುವಿನ ವಿಶ್ವಾಸ ನಿರ್ಮಾಣದ ವೇದಿಕೆಯಾಗಬೇಕು. ನೀರು ಲಭ್ಯವಿರುವ ಸಾಮಾನ್ಯ ವರ್ಷ ಮತ್ತು ಕೊರತೆಯ ವರ್ಷಗಳಿಗೆ ಒಂದೇ ಮಾದರಿಯ ಹಂಚಿಕೆ ಅನ್ವಯಿಸುವ ಬದಲು, ನೈಜ ಲಭ್ಯತೆಯ ಆಧಾರದಲ್ಲಿ ಸಂಕಷ್ಟ ಹಂಚಿಕೆಯ ಸ್ಪಷ್ಟ ಸೂತ್ರ ರೂಪಿಸಬೇಕು ಎಂಬ ಬೇಡಿಕೆ ಬಹುಕಾಲದಿಂದಲೂ ಇದೆ. ಒಟ್ಟು ಲಭ್ಯವಿರುವ ನೀರಿನಲ್ಲಿ ಕೊರತೆ ಉಂಟಾದರೆ ಅದರ ಭಾರವನ್ನು ಕರ್ನಾಟಕ ಮತ್ತು ತಮಿಳುನಾಡು ಯಾವ ಪ್ರಮಾಣದಲ್ಲಿ ಹಂಚಿಕೊಳ್ಳಬೇಕು ಎಂಬುದನ್ನು ಮುಂಚಿತವಾಗಿಯೇ ಸ್ಪಷ್ಟಪಡಿಸಿದರೆ ಪ್ರತಿ ಬಾರಿ ಮಳೆ ಕೊರತೆಯಾದಾಗ ನ್ಯಾಯಾಲಯ, ಪ್ರತಿಭಟನೆ ಮತ್ತು ರಾಜಕೀಯ ಸಂಘರ್ಷದ ಪರಿಸ್ಥಿತಿ ತಗ್ಗಬಹುದು.

ಸದ್ಯ ಕಬಿನಿ ಸೇರಿದಂತೆ ಕಾವೇರಿ ಜಲಾಶಯಗಳಿಗೆ ಒಳಹರಿವು ಹೆಚ್ಚಿರುವುದು ಕರ್ನಾಟಕಕ್ಕೆ ತುಸು ನೆಮ್ಮದಿ ನೀಡಿದೆ. ಕುಡಿಯುವ ನೀರಿನ ಭದ್ರತೆ ಮತ್ತು ರೈತರ ನೀರಾವರಿ ಅಗತ್ಯಗಳ ಕುರಿತು ಇದ್ದ ತಕ್ಷಣದ ಆತಂಕ ಸ್ವಲ್ಪ ಕಡಿಮೆಯಾಗಿದೆ. ತಮಿಳುನಾಡಿಗೂ ನಿರೀಕ್ಷಿತ ನೀರಿನ ಒಂದು ಭಾಗ ತಲುಪಿರುವುದರಿಂದ ಅಲ್ಲಿನ ಕುರುವೈ ಬೆಳೆಗೆ ಸಹಾಯವಾಗಲಿದೆ. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶ ಪಾಲಿಸುವ ಕುರಿತು ಕರ್ನಾಟಕದ ಮೇಲೆ ಇದ್ದ ಒತ್ತಡವೂ ತಾತ್ಕಾಲಿಕವಾಗಿ ಇಳಿದಿದೆ. ಆದರೆ ಇದು ಮಳೆಯ ನೆರವಿನಿಂದ ಸಿಕ್ಕಿರುವ ವಿರಾಮ ಮಾತ್ರ. ಜಲಾಶಯಗಳಿಗೆ ಒಳಹರಿವು ಕಡಿಮೆಯಾದರೆ, ತಮಿಳುನಾಡಿನಿಂದ ಹೆಚ್ಚುವರಿ ನೀರಿನ ಬೇಡಿಕೆ ಬಂದರೆ ಅಥವಾ ಮಳೆಯ ಕೊರತೆಯಿಂದ ಕರ್ನಾಟಕದಲ್ಲಿ ನೀರಾವರಿ ಸಮಸ್ಯೆ ಉಂಟಾದರೆ ವಿವಾದ ಮತ್ತೊಮ್ಮೆ ತೀವ್ರಗೊಳ್ಳಬಹುದು.

ಆದ್ದರಿಂದ ಕಾವೇರಿ ಬಿಕ್ಕಟ್ಟಿನ ಶಮನವಲ್ಲ; ಸದ್ಯಕ್ಕೆ ಉದ್ವಿಗ್ನತೆ ಕಡಿಮೆಯಾಗಿದೆ. ಆದರೆ ವಿವಾದದ ಮೂಲ ಸಮಸ್ಯೆಗಳು ಬಗೆಹರಿದಿಲ್ಲ. ಮಳೆ ಹೆಚ್ಚಾಗಿ ನೀರು ಹರಿದಾಗ ಸ್ನೇಹ ಮತ್ತು ಮಳೆ ಕಡಿಮೆಯಾದಾಗ ಸಂಘರ್ಷ ಎಂಬ ಚಕ್ರದಿಂದ ಎರಡೂ ರಾಜ್ಯಗಳು ಹೊರಬರಬೇಕಾಗಿದೆ. ಕಾವೇರಿಯನ್ನು ಒಂದು ರಾಜ್ಯದ ಸ್ವತ್ತು ಅಥವಾ ಮತ್ತೊಂದು ರಾಜ್ಯದ ಹಕ್ಕು ಎಂಬ ಸೀಮಿತ ದೃಷ್ಟಿಯಿಂದ ನೋಡುವ ಬದಲು, ಸಂಪೂರ್ಣ ನದಿ ಕಣಿವೆಯ ಪರಿಸರ ವ್ಯವಸ್ಥೆ ಮತ್ತು ಅದನ್ನು ಅವಲಂಬಿಸಿರುವ ಜನರ ಸಾಮೂಹಿಕ ಸಂಪನ್ಮೂಲವೆಂದು ಪರಿಗಣಿಸಬೇಕು. ಜಲಾಶಯ ನಿರ್ಮಾಣ, ನೀರು ಬಿಡುಗಡೆ ಮತ್ತು ನ್ಯಾಯಾಲಯದ ತೀರ್ಪುಗಳ ಜತೆಗೆ ನೀರಿನ ಮಿತವ್ಯಯ, ಬೆಳೆ ಪದ್ಧತಿಯ ಬದಲಾವಣೆ, ಕೆರೆಗಳ ಪುನಶ್ಚೇತನ, ನಗರ ನೀರು ನಿರ್ವಹಣೆ, ಅರಣ್ಯ ಸಂರಕ್ಷಣೆ ಮತ್ತು ಹವಾಮಾನ ಬದಲಾವಣೆಗೆ ಹೊಂದಿಕೊಳ್ಳುವ ದೀರ್ಘಕಾಲೀನ ನೀತಿ ರೂಪಿಸಬೇಕು.

ಕೊಡಗು ಮತ್ತು ವಯನಾಡಿನ ಮಳೆ ಈಗ ಕರ್ನಾಟಕ ಮತ್ತು ತಮಿಳುನಾಡಿನ ನಡುವಿನ ಕಾವೇರಿ ಸಂಘರ್ಷಕ್ಕೆ ತಾತ್ಕಾಲಿಕವಾಗಿ ಶಾಂತಿ ತಂದಿದೆ. ಆದರೆ ಈ ಶಾಂತಿಯ ಅವಧಿಯನ್ನು ಎರಡೂ ರಾಜ್ಯಗಳು ಮುಂದಿನ ಸಂಘರ್ಷಕ್ಕೆ ಸಿದ್ಧತೆ ನಡೆಸಲು ಬಳಸುವುದಕ್ಕಿಂತ, ಸಹಕಾರದ ವ್ಯವಸ್ಥೆಯನ್ನು ಬಲಪಡಿಸಲು ಬಳಸಬೇಕಾಗಿದೆ. ರೈತರು, ಜಲತಜ್ಞರು, ಪರಿಸರ ವಿಜ್ಞಾನಿಗಳು, ನಗರ ಯೋಜಕರು ಮತ್ತು ಎರಡೂ ರಾಜ್ಯಗಳ ಪ್ರತಿನಿಧಿಗಳನ್ನು ಒಳಗೊಂಡ ಶಾಶ್ವತ ಸಮನ್ವಯ ವ್ಯವಸ್ಥೆ ರೂಪಿಸಬೇಕು. ಕಾವೇರಿ ಕಣಿವೆಯ ಪ್ರತಿಯೊಂದು ಹನಿ ನೀರನ್ನೂ ವೈಜ್ಞಾನಿಕವಾಗಿ ಲೆಕ್ಕಹಾಕಿ, ನ್ಯಾಯಯುತವಾಗಿ ಹಂಚಿ, ದಕ್ಷವಾಗಿ ಬಳಸಿದಾಗ ಮಾತ್ರ ಪ್ರತಿವರ್ಷ ಮಳೆಗಾಲದಲ್ಲಿ ಮರುಕಳಿಸುವ ಈ ಬಿಕ್ಕಟ್ಟಿಗೆ ದೀರ್ಘಕಾಲೀನ ಪರಿಹಾರ ದೊರೆಯಬಹುದು. ಸದ್ಯ ಜಲಾಶಯಗಳಿಗೆ ಹೆಚ್ಚಿದ ಒಳಹರಿವು ವಿವಾದಕ್ಕೆ ಅಂತ್ಯವಲ್ಲ; ಅದು ಎರಡೂ ರಾಜ್ಯಗಳಿಗೆ ಸಮಸ್ಯೆಯ ಮೂಲವನ್ನು ಅರಿತು ಸಮಗ್ರ ಪರಿಹಾರ ಕಂಡುಕೊಳ್ಳಲು ಪ್ರಕೃತಿ ನೀಡಿರುವ ಮತ್ತೊಂದು ಅವಕಾಶವಾಗಿದೆ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR